ಸಂಪುಟ : ೯ ಸಂಚಿಕೆ ೮೩ ಪುಟ : ೪ ಬೆಲೆ: ೩.೦೦ ಗುರುವಾರ ಮೇ ೨ ೨೦೨೪ Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್


# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 83 Pages : 4 Price : 3.00 Thursday May 2 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಕ್ಷೇತ್ರದ ಅಭಿವೃದ್ಧಿಗೆ ಕೈಜೋಡಿಸಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮೀಪದ ಶಿಗ್ಲಿ ಗ್ರಾಮದ ದೇವಾಂಗ ಸಮಾಜದ ಬಾಂಧವರೊಂದಿಗೆ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿವರ ಚುನಾವಣೆ ಪ್ರಚಾರಾರ್ಥವಾಗಿ ಸಮಾಜದ ಬಾಂಧವರೊಂದಿಗೆ ಬುಧವಾರ ಸಭೆ ನಡೆಸಿ ಮತಯಾಚನೆ ಮಾಡಲಾಯಿತು.

ಪ್ರಚಾರ ಸಭೆಯಲ್ಲಿ ಮಾಜಿ ಸಚಿವ ಹಾಗೂ ವಿ.ಪ ಸದಸ್ಯ ಎಂ.ಡಿ. ಲಕ್ಷ್ಮೀನಾರಾಯಣ ಮಾತನಾಡಿ, ಬಸವರಾಜ ಬೊಮ್ಮಾಯಿಯವರು ಹಿಂದಿನ ಸರ್ಕಾರದ ಅನುದಾನದಲ್ಲಿ ಹಲವಾರು ಅಭಿವೃದ್ಧಿ ಯೋಜನೆಗಳನ್ನು ಕೈಗೊಂಡಿದ್ದು, ಅಭಿವೃದ್ಧಿಯ ಬಗ್ಗೆ ದೂರದೃಷ್ಟಿ, ಕ್ಷೇತ್ರದ ಬಗ್ಗೆ ವಿಶೇಷ ಕಾಳಜಿ ಹೊಂದಿದ್ದಾರೆ. ಬಸವರಾಜ ಬೊಮ್ಮಾಯಿಯವರಿಗೆ ಆಶೀರ್ವಾದ ಮಾಡುವ ಮೂಲಕ ಕ್ಷೇತ್ರದ ಅಭಿವೃದ್ಧಿಗೆ ಎಲ್ಲರೂ ಕೈಜೋಡಿಸಬೇಕಾಗಿದೆ. ನರೇಂದ್ರ ಮೋದಿ ಅವರನ್ನು ಮೂರನೇ ಬಾರಿಗೆ ಪ್ರಧಾನ ಮಂತ್ರಿಗಳಾಗಿ ಆಯ್ಕೆ ಮಾಡಲು ಭಾರತೀಯ ಜನತಾ ಪಕ್ಷವನ್ನು ಬೆಂಬಲಿಸುವಂತೆ ಮನವಿ ಮಾಡಿದರು. ಈ ವೇಳೆ ಶಾಸಕ ಡಾ.ಚಂದ್ರು ಲಮಾಣಿ, ಮಾಜಿ ಶಾಸಕ ಗಂಗಣ್ಣ ಮಹಾಂತಶೆಟ್ಟರ, ಡಿ.ವೈ. ಹುನಗುಂದ, ಹುಲಗೂರ, ಸೋಮಣ್ಣ ಡಾಣಗಲ್, ತಳವಾರ, ಕೃಷ್ಣ ಬಿದರಳ್ಳಿ, ಆದೇಶ ಹುಲಗೂರ, ಹಂಜಿ ಸೇರಿದಂತೆ ಪಕ್ಷದ ಹಿರಿಯ ನಾಯಕರು, ದೇವಾಂಗ ಸಮಾಜದ ಬಾಂಧವರು ಹಾಜರಿದ್ದರು.

## ಗಜೇಂದ್ರಗಡಕ್ಕೆ ಇಂದು ಬಿ.ಎಸ್. ಯಡಿಯುರಪ್ಪ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ



ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯುರಪ್ಪ ಮೇ.2ರ ಸಂಜೆ 6 ಗಂಟೆಗೆ ಗಜೇಂದ್ರಗಡ ಪಟ್ಟಣಕ್ಕೆ ಆಗಮಿಸುತ್ತಿದ್ದು, ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಅವರ ಪರವಾಗಿ ಮತಯಾಚಿಸಲಿದ್ದಾರೆ.

ಎಪಿಎಂಸಿ ಎದುರುಗಡೆ ಇರುವ ಪುರಸಭೆಯ ಬಯಲಿನಲ್ಲಿ ಬೃಹತ್ ಸಮಾವೇಶವಿದ್ದು, ಈ ಸಮಾವೇಶದಲ್ಲಿ ಮಾಜಿ ಸಚಿವರಾದ ಕಳಕಪ್ಪ ಬಂಡಿ, ವಿ.ಪ ಸದಸ್ಯ ಎಸ್.ವ್ಹಿ. ಸಂಕನೂರ, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ ಹಾಗೂ ಪಕ್ಷದ ಪ್ರಮುಖರು ಭಾಗವಹಿಸಲಿದ್ದಾರೆ. ಈ ಕಾರ್ಯಕ್ರಮಕ್ಕೆ ಕಾರ್ಯಕರ್ತರು, ಅಭಿಮಾನಿಗಳು, ಮತದಾರ ಬಂಧುಗಳು ಆಗಮಿಸಿ ಸಮಾವೇಶವನ್ನು ಯಶಸ್ವಿಗೊಳಿಸಬೇಕೆಂದು ಜಿಲ್ಲಾ ವಕ್ತಾರ ಎಂ.ಎಂ. ಹಿರೇಮಠ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಸನಗೌಡ ಪಾಟೀಲ್ ಯತ್ನಾಳ್ ಇಂದು ನಗರಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ



ಬಿಜಾಪುರ ಶಾಸಕ, ಬಿಜೆಪಿ ಹಿರಿಯ ನಾಯಕ ಬಸನಗೌಡ ಪಾಟೀಲ್ ಯತ್ನಾಳ್ ಮೇ.2ರ ಸಂಜೆ 4 ಗಂಟೆಗೆ ಗದುಗಿಗೆ ಆಗಮಿಸುತ್ತಿದ್ದು, ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಅವರ ಪರವಾಗಿ ಮತಯಾಚಿಸಲಿದ್ದಾರೆ. ಗದಗ ನಗರದ ಎಪಿಎಂಸಿ ಯಾರ್ಡ್‌ನಲ್ಲಿರುವ ಸ್ವಾಮಿ ವಿವೇಕಾನಂದ ಸಭಾಭವನದಲ್ಲಿ ಬೃಹತ್ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದು, ಈ ಸಮಾವೇಶದಲ್ಲಿ ಮಾಜಿ ಸಚಿವ ಸಿ.ಸಿ.ಪಾಟೀಲ, ವಿಧಾನ ಪರಿಷತ್ ಸದಸ್ಯ ಎಸ್.ವ್ಹಿ. ಸಂಕನೂರ, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ, ಬಿಜೆಪಿ ಮುಖಂಡ ಅನಿಲ ಮೆಣಸಿನಕಾಯಿ, ನಗರ ಅಧ್ಯಕ್ಷ ಅನಿಲ ಅಬ್ಬಿಗೇರಿ, ಗ್ರಾಮೀಣ ಅಧ್ಯಕ್ಷ ದ್ಯಾಮಣ್ಣ ನೀಲಗುಂದ ಹಾಗೂ ಪಕ್ಷದ ಪ್ರಮುಖರು ಭಾಗವಹಿಸಲಿದ್ದಾರೆ. ಈ ಕಾರ್ಯಕ್ರಮಕ್ಕೆ ಕಾರ್ಯಕರ್ತರು, ಅಬಿಮಾನಿಗಳು, ಮತದಾರ ಬಂಧುಗಳು ಆಗಮಿಸಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಜಿಲ್ಲಾ ವಕ್ತಾರ ಎಂ.ಎಂ. ಹಿರೇಮಠ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮತಗಟ್ಟೆ ಅಧಿಕಾರಿಗಳಿಗೆ 2ನೇ ಸುತ್ತಿನ ತರಬೇತಿ ಕಾರ್ಯಕ್ರಮದಲ್ಲಿ ಡಿಸಿ ವೈಶಾಲಿ ಎಂ.ಎಲ್

# ಆಯೋಗದ ನಿರ್ದೇಶನದಂತೆ ಕರ್ತವ್ಯ ನಿರ್ವಹಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭಾ ಚುನಾವಣೆ ಸಂಬಂಧ ಚುನಾವಣಾ ಆಯೋಗದ ನಿರ್ದೇಶನಗಳನ್ನು ಚಾಚೂ ತಪ್ಪದೇ ಪಾಲಿಸಬೇಕು. ಯಾವುದೇ ರೀತಿಯ ಗೊಂದಲಗಳಿಗೆ ಅವಕಾಶ ಮಾಡದೇ ಚುನಾವಣಾ ಆಯೋಗದ ನಿರ್ದೇಶನದಂತೆ ಕರ್ತವ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಸೂಚಿಸಿದರು.

ಲೋಕಸಭಾ ಸಾರ್ವತ್ರಿಕ ಚುನಾವಣೆ ಸಂಬಂಧ ಮತಗಟ್ಟೆ ಅಧಿಕಾರಿಗಳು ಮತ್ತು ಸಹಾಯಕ ಮತಗಟ್ಟೆ ಅಧಿಕಾರಿಗಳಿಗೆ ಜಿಲ್ಲೆಯ ಗದಗ, ಶಿರಹಟ್ಟಿ, ರೋಣ ಮತ್ತು ನರಗುಂದದಲ್ಲಿ ನಡೆದ 2ನೇ ಸುತ್ತಿನ ತರಬೇತಿ ಕಾರ್ಯಾಗಾರದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಮತಗಟ್ಟೆ ಅಧಿಕಾರಿಗಳು ಮತ್ತು ಸಹಾಯಕ ಮತಗಟ್ಟೆ ಅಧಿಕಾರಿಗಳು ಮಸ್ಟರಿಂಗ್, ಚುನಾವಣಾ ದಿನದಂದು ಅಣುಕು ಮತದಾನ, ಮತದಾನ, ಮತದಾನ ಪೂರ್ಣಗೊಂಡ ನಂತರ ಅನುಸರಿಸಬೇಕಾದ ಕ್ರಮಗಳು, ಡಿಮಸ್ಟರಿಂ ನಿರ್ದೇಶನ ನೀಡಿದರು.

ಲೋಕಸಭೆ ಚುನಾವಣೆಗೆ ನಿಯೋಜಿಸಿರುವ ಮತಗಟ್ಟೆ ಹಾಗೂ ಸಹಾಯಕ ಮತಗಟ್ಟೆ ಅಧಿಕಾರಿಗಳು ಕ್ರಮಬದ್ಧವಾಗಿ ಚುನಾವಣೆ ನಡೆಸಬೇಕು. ಸಂಶಯವಿದ್ದಲ್ಲಿ ಸೆಕ್ಟರ್ ಅಧಿಕಾರಿಗಳ ಗಮನಕ್ಕೆ ತರಬೇಕು. ವಿಶ್ವಾಸ ಹಾಗೂ ಕರ್ತವ್ಯಪ್ರಜ್ಞೆಯಿಂದ ಕಾರ್ಯ ನಿರ್ವಹಿಸಬೇಕು. ವಿದ್ಯುನ್ಮಾನ ಮತಯಂತ್ರಗಳ ನಿರ್ವಹಣೆ, ಅಣುಕು ಮತದಾನ ಮತ್ತಿತರ ವಿಚಾರದಲ್ಲಿ ಮತಗಟ್ಟೆ ಅಧಿಕಾರಿಗಳು ಜಾಗೃತಿ ವಹಿಸಬೇಕು. ಜೊತೆಗೆ ಚುನಾವಣಾ ಪಾವಿತ್ರ್ಯತೆ ಕಾಪಾಡಬೇಕು ಎಂದು ಹೇಳಿದರು.



ಜಿಲ್ಲೆಯಲ್ಲಿ 961 ಮತಗಟ್ಟೆಗಳು ಇದ್ದು, ಈ ಪೈಕಿ ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 251, ಗದಗ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 223, ರೋಣ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 267 ಹಾಗೂ ನರಗುಂದ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 220 ಮತಗಟ್ಟೆಗಳಿವೆ. ಮತಗಟ್ಟೆಗೆ ನಿಯೋಜಿಸಿರುವ ಮತಗಟ್ಟೆ ಅಧಿಕಾರಿಗಳು ಮತ್ತು ಸಹಾಯಕ ಮತಗಟ್ಟೆ ಅಧಿಕಾರಿಗಳಿಗೆ ಎರಡನೇ ಸುತ್ತಿನ ಚುನಾವಣಾ ತರಬೇತಿ ನೀಡಲಾಗುತ್ತಿದೆ ಎಂದರು.

ಮಾಸ್ಟರ್ ತರಬೇತಿದಾರರು ಅವರು ಮಾಹಿತಿ ನೀಡಿ, ಚುನಾವಣಾ ಆಯೋಗ ನೀಡಿರುವ ಮಾರ್ಗಸೂಚಿಗಳನ್ನು ಸರಿಯಾಗಿ ಅರ್ಥ ಮಾಡಿಕೊಂಡು ಕಾರ್ಯನಿರ್ವಹಿಸಬೇಕು. ಚುನಾವಣಾ ಕಾರ್ಯಕ್ಕೆ ನಿಯೋಜನೆಗೊಂಡ ಪ್ರತಿಯೊಬ್ಬ ಅಧಿಕಾರಿ, ಸಿಬ್ಬಂದಿಗಳು ಚುನಾವಣಾ ಸಂಬಂಧ ಚುನಾವಣಾ ಆಯೋಗದ ನಿರ್ದೇಶನವನ್ನು ಪಾಲಿಸಬೇಕು. ಮತಗಟ್ಟೆ ಅಧಿಕಾರಿಗಳು ಅಣುಕು ಮತದಾನ, ಪ್ರಮಾಣಪತ್ರ ಬರೆಯುವುದು, ಇವಿಎಂ, ಕಂಟ್ರೋಲ್ ಯುನಿಟ್, ಬ್ಯಾಲೆಟ್ ಯುನಿಟ್, ಹಾಗೂ ವಿವಿ ಪ್ಯಾಟ್ ಬಗ್ಗೆ ಸ್ಪಷ್ಟವಾಗಿ ತಿಳಿದುಕೊಳ್ಳಬೇಕು ಎಂದರು.

ಉಪವಿಭಾಗಾಧಿಕಾರಿ ವೆಂಕಟೇಶ ನಾಯ್ಕ ಮಾತನಾಡಿ, ಪ್ರತಿ ಮತಗಟ್ಟೆಗಳಲ್ಲಿ ಮತಗಟ್ಟೆ ಅಧಿಕಾರಿ, ಸಹಾಯಕ ಮತಗಟ್ಟೆ ಅಧಿಕಾರಿ, 2ನೇ ಮತಗಟ್ಟೆ ಅಧಿಕಾರಿ ಹಾಗೂ 3ನೇ ಮತಗಟ್ಟೆ ಅಧಿಕಾರಿ ಕರ್ತವ್ಯ ನಿರ್ವಹಿಸಲಿದ್ದಾರೆ ಎಂದರು.

ಜಿಲ್ಲೆಯ 4 ವಿಧಾನಸಭಾ ಕ್ಷೇತ್ರದ ಚುನಾವಣಾಧಿಕಾರಿಗಳು, ತಹಸೀಲ್ದಾರರು, ಸೆಕ್ಟರ್ ಅಧಿಕಾರಿಗಳು, ಪಿಆರ್‌ಓ, ಎಪಿಆರ್‌ಓ ಸೇರಿದಂತೆ ಇತರರು ಇದ್ದರು.

### ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ ಮುಖಂಡ ಅನಿಲ ಮೆಣಸಿನಕಾಯಿ

# ಬಿಜೆಪಿಗೆ ಅಹಿಂದ ವರ್ಗದ ಬೆಂಬಲವಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಬಿಜೆಪಿ ಸರ್ಕಾರವು ಅಂಬೇಡ್ಕರ್ ಅವರಿಗೆ ಸಂಬಂಧಿಸಿದ 5 ಪಂಚಕ್ಷೇತ್ರವನ್ನು ಅಭಿವೃದ್ಧಿಪಡಿಸಿತು. ವಾಜಪೇಯಿ ಅವರ ಶಿಫಾರಸ್ಸಿನ ಮೇರೆಗೆ ಅಂಬೇಡ್ಕರ್ ಅವರಿಗೆ ಭಾರತ ರತ್ನ ನೀಡಲಾಯಿತು. ಅಂಬೇಡ್ಕರ್ ಅವರು ಲೋಕಸಭಾ ಚುನಾವಣೆಗೆ ಸ್ಪರ್ಧಿಸಿದ್ದಾಗ ಅವರ ಚುನಾವಣಾ ಏಜೆಂಟ್ ಆಗಿದ್ದವರು ಆರ್‌ಎಸ್‌ಎಸ್ ವ್ಯಕ್ತಿ. ಹೀಗೆ ದಲಿತ, ಹಿಂದುಳಿದ ಸಮುದಾಯಕ್ಕೆ ಬಿಜೆಪಿ ಬೆಂಬಲ ನೀಡುತ್ತಲೇ ಬಂದಿದೆ. ಅಹಿಂದ ಎಂದರೆ ಕೇವಲ ಕಾಂಗ್ರೆಸ್ ಪಕ್ಷ ಅಲ್ಲ. ಬಿಜೆಪಿ ಪಕ್ಷಕ್ಕೆ ಅಹಿಂದ ವರ್ಗದ ಅಧಿಕ ಬೆಂಬಲವಿದೆ ಎಂದು ಬಿಜೆಪಿ ಮುಖಂಡ ಅನಿಲ ಮೆಣಸಿನಕಾಯಿ ಹೇಳಿದರು.

ನಗರದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷ ದಲಿತರನ್ನು ಮತ ಬ್ಯಾಂಕ್ ಆಗಿ ಕಳೆದ 70 ವರ್ಷಗಳಿಂದಲೂ ಬಳಸುತ್ತಿದೆ. ಕಾಂಗ್ರೆಸ್ ಪಕ್ಷ ಸುಡುವ ಮನೆ ಇದ್ದಂತೆ. ಆ ಮನೆಯಲ್ಲಿ ಇದ್ದರೆ ಸುಟ್ಟು ಬೂದಿ ಆಗುತ್ತಾರೆ ಎಂದು ಅಂಬೇಡ್ಕರ್ ಹೇಳಿದ್ದರು ಎಂದರಲ್ಲದೆ, ನಕಲಿ ವಿಡಿಯೋಗಳನ್ನು ಹರಿಬಿಟ್ಟು ಬಿಜೆಪಿ ಅಂಬೇಡ್ಕರ್ ವಿರೋಧಿ ಎಂದು ತಪ್ಪಾಗಿ ಬಿಂಬಿಸಲಾಗುತ್ತಿದೆ ಎಂದು ಆರೋಪಿಸಿದರು.

ಅಂಬೇಡ್ಕರ್ ಅವರ ಆದರ್ಶಗಳನ್ನು ಬಿಜೆಪಿ ಪಕ್ಷ ಅಳವಡಿಸಿಕೊಳ್ಳುತ್ತ ಬಂದಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಜಾರಿಗೆ ತಂದ ಯೋಜನೆಗಳು ಪ್ರತಿಯೊಬ್ಬ ನಾಗರಿಕರಿಗೂ ತಲುಪುವಂತಹವುಗಳಾಗಿವೆ. ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಶಿಶುನಾಳ ಷರೀಫರ ನಾಡಿನಿಂದ ಬಂದವರು. ಅವರ ಆದರ್ಶಗಳನ್ನು ಬೊಮ್ಮಾಯಿ ಅವರಲ್ಲಿ ಕಾಣುತ್ತೇವೆ ಎಂದರು.




ಮೇ 3 ಮತ್ತು 4ರಂದು ಎರಡು ದಿನಗಳ ಕಾಲ ನಗರದಲ್ಲಿ ಮುಖಂಡ ಗೋವಿಂದ ಕಾರಜೋಳ ಹಾಗೂ ಚಲವಾದಿ ನಾರಾಯಣರ ನೇತೃತ್ವದಲ್ಲಿ ಬೆಟಗೇರಿಯಲ್ಲಿ ಸಮಾವೇಶ, ದಲಿತ ಸಮುದಾಯಗಳೊಂದಿಗೆ ಚರ್ಚೆ, ಸಂವಾದ ಕಾರ್ಯಕ್ರಮಗಳು ನಡೆಯಲಿವೆ ಎಂದು ಅನಿಲ ಮೆಣಸಿನಕಾಯಿ ತಿಳಿಸಿದರು.

ಎಸ್ಸಿ ಮೋರ್ಚಾ ಜಿಲ್ಲಾಧ್ಯಕ್ಷ ಮಂಜುನಾಥ ಮುಳಗುಂದ ಮಾತನಾಡಿ, ದಲಿತ ಮತ್ತು ಹಿಂದುಳಿದ ವರ್ಗಗಳನ್ನು ತಮ್ಮ ಲಾಭಕ್ಕಾಗಿ ಕಾಂಗ್ರೆಸ್ ಪಕ್ಷ ಬಳಸಿಕೊಳ್ಳುತ್ತಲೇ ಬಂದಿದೆ. ಇದರಿಂದ ದಲಿತ ಸಮುದಾಯಗಳ ಅಭಿವೃದ್ಧಿ ಕುಂಠಿತವಾಗುತ್ತಿದೆ. ಬಿಜೆಪಿ ಪಕ್ಷದಿಂದಲೇ ದಲಿತ, ಹಿಂದುಗಳ ವರ್ಗಗಳ ಅಭಿವೃದ್ಧಿ ಸಾಧ್ಯ ಎಂದರು.

ಪಕ್ಷದ ಪ್ರಮುಖರಾದ ಅನಿಲ ಅಬ್ಬಿಗೇರಿ, ಕಾಂತಿಲಾಲ್ ಬನ್ಸಾಲಿ ಮುಂತಾದವರು ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

## ಕೇಂದ್ರ ಸರ್ಕಾರಕ್ಕೆ ಬಡವರ ಬಗ್ಗೆ ಕಾಳಜಿಯಿಲ್ಲ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರಕಾರ 10 ವರ್ಷಗಳ ಕಾಲ ಅಧಿಕಾರದಲ್ಲಿದ್ದರೂ ಬಡವರ ಬಗ್ಗೆ ಕಾಳಜಿ ವಹಿಸದೇ ಕಾಲಹರಣ ಮಾಡಿದೆ. ಈ ಬಾರಿ ಕಾಂಗ್ರೆಸ್ ಪರವಾಗಿ ಮತದಾರರು ಒಲವು ತೋರುತ್ತಿದ್ದು, ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರನ್ನು ಹೆಚ್ಚು ಮತಗಳಿಂದ ಆಯ್ಕೆ ಮಾಡಬೇಕು ಎಂದು ಸಚಿವ ಎಚ್.ಕೆ. ಪಾಟೀಲ ವಿನಂತಿಸಿದರು.

ಅವರು ಪಟ್ಟಣದಲ್ಲಿ ಹಾವೇರಿ-ಗದಗ ಲೋಕಸಭೆ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರ ಪ್ರಚಾರಾರ್ಥವಾಗಿ ರೋಡ್‌ನಡೆಸಿ, ಶೋ ನಂತರ ಗಾಂಧಿಕಟ್ಟೆ ಆವರಣದಲ್ಲಿ ಸಭೆಯನ್ನುದ್ದೇಶಿಸಿ ಮಾತನಾಡಿದರು.

ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಮಾತನಾಡಿ, ನಮ್ಮ ಕಾಂಗ್ರೆಸ್ ಸರಕಾರ ಯಾವಾಗಲೂ




ಬಡವರ, ರೈತರ ಕಲ್ಯಾಣಕ್ಕಾಗಿ ಶ್ರಮಿಸುತ್ತಿರುವ ಪಕ್ಷವಾಗಿದ್ದು, ಈ ಬಾರಿ ನನ್ನನ್ನು ಗೆಲ್ಲಿಸಿ ನಿಮ್ಮ ಸೇವೆ ಮಾಡುವ ಅವಕಾಶವನ್ನು ಕೊಡಿ ಎಂದರು.

ಮಾಜಿ ಶಾಸಕ ಡಿ.ಆರ್. ಪಾಟೀಲ್, ಮುಳಗುಂದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಿ.ವಿ. ಸುಂಕಾಪೂರ, ಎಸ್.ಎಂ. ನೀಲಗುಂದ, ಎಂ.ಡಿ. ಬಟ್ಟೂರ, ಅಶೋಕ ಸೊನಗೋಜಿ, ಬಸವರಾಜ ಬಾತಾಖಾನಿ, ಎಸ್.ಸಿ. ಬಡ್ನಿ, ಎನ್. ಆರ್. ದೇಶಪಾಂಡೆ, ಕೆ.ಎಲ್. ಕರಿಗೌಡರ, ಬಸವರಾಜ ವಾಲಿ, ಮಾಹಾಂತಪ್ಪ ನೀಲಗುಂದ, ಮಾಹಾದೇವಪ್ಪ ಗಡಾದ, ವಿಜಯ ನೀಲಗುಂದ, ಇಮಾಮಸಾಬ ಶೇಖ, ಪಾರವ್ವ ಅಳ್ಳಣ್ಣವರ ಇದ್ದರು.

### ನಿರ್ಭೀತ ಮತದಾನಕ್ಕಾಗಿ ಪೊಲೀಸ್ ಸಿಬ್ಬಂದಿಗಳಿಂದ ರೂಟ್ ಮಾರ್ಚ್

## ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲೋಕಸಭಾ ಚುನಾವಣೆಯಲ್ಲಿ ಮತದಾರರು ಮುಕ್ತವಾಗಿ, ನಿರ್ಭೀತಿಯಿಂದ ಮತದಾನ ಮಾಡಲು ಮತ್ತು ಚುನಾವಣೆ ವೇಳೆ ಶಾಂತಿ-ಸುವ್ಯವಸ್ಥೆ ಕಾಪಾಡುವ ಹಿತ ದೃಷ್ಟಿಯಿಂದ ಬುಧವಾರ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಪೊಲೀಸ್ ಸಿಬ್ಬಂದಿಗಳಿಂದ ರೂಟ್ ಮಾರ್ಚ್ ನಡೆಯಿತು.

ರೂಟ್ ಮಾರ್ಚ್ ಪಟ್ಟಣದ ಹಳೆ ಪೊಲೀಸ್ ಠಾಣೆಯಿಂದ ಪ್ರಾರಂಭಗೊಂಡು ಬ್ರಹ್ಮದೇವರ ಸರ್ಕಲ್, ಹಾವಳಿ ಆಂಜನೇಯ ದೇವಸ್ಥಾನ ಮೂಲಕ ಬಜಾರ್ ಮುಖ್ಯ ರಸ್ತೆ ಪುರಸಭೆ ಶಿಗ್ಲಿ ನಾಕಾ ಮುಖಾಂತರ ಹಾಯ್ದು ಬಸ್ ಸ್ಟಾಂಡ್ ಮುಖಾಂತರ ಹೊಸ ಪೊಲೀಸ್ ಠಾಣೆಗೆ ತಲುಪಿ ಮುಕ್ತಾಯಗೊಂಡಿತು.



ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲೆಯ ಹೆಚ್ಚುವರಿ ಪೊಲೀಸ್ ಅಧೀಕ್ಷಕ ಎಂ.ಬಿ. ಸಂಕದ, ಮತದಾನದ ದಿನ ಪ್ರತಿಯೊಬ್ಬರೂ ಮನೆಯಿಂದ ಹೊರಗಡೆ ಬಂದು ನಿರ್ಭೀತಿಯಿಂದ ಮತದಾನ ಮಾಡಬೇಕು. ಪ್ರಜಾಪ್ರಭುತ್ವದಲ್ಲಿ ಪ್ರತಿಯೊಂದು ಮತವೂ ಮಹತ್ವದ್ದಾಗಿದ್ದು, ಮತದಾನ ಒಂದು ಮಹತ್ವದ ಕಾರ್ಯವಾಗಿದೆ. ಈ ನಿಟ್ಟಿನಲ್ಲಿ ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಬೇಕು ಹಾಗೂ ಕಾನೂನು-ಸುವ್ಯವಸ್ಥೆ ಕಾಪಾಡುವ ಸಲುವಾಗಿ ಪೊಲೀಸರೊಂದಿಗೆ ಸಹಕರಿಸಬೇಕು. ಅಹಿತಕರ ಘಟನೆಯಲ್ಲಿ ಬಾಗಿಯಾದರೆ ಅಂತವರ ಮೇಲೆ ಕಾನೂನು ಕ್ರಮ ಜರುಗಿಸಲಾಗುವುದು. ಕಾನೂನು-ಸುವ್ಯವಸ್ಥೆಗೆ ಸಮಸ್ಯೆಯಾಗದಂತೆ ಸೂಕ್ತ ಭದ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದ ಅವರು, ಮತದಾರರಲ್ಲಿ ಆತ್ಮವಿಶ್ವಾಸವನ್ನು ಮೂಡಿಸುವುದು ಇದರ ಉದ್ದೇಶವಾಗಿದೆ ಎಂದು ಹೇಳಿದರು

ಈ ಸಂದರ್ಭದಲ್ಲಿ ಜಿಲ್ಲಾ ಡಿಎಸ್‌ಪಿ ಜೆ.ಎಚ್. ಇನಾಮದಾರ, ಶಸಸ್ತ್ರ ಪೊಲೀಸ್ ಇನ್ಸ್‌ಪೆಕ್ಟರ್ ಎಸ್.ಬಿ. ಚೌದರಿ, ಪಿಎಸ್‌ಐ ಈರಪ್ಪ ರಿತ್ತಿ, ತಾ.ಪಂ ಇಓ ಕೃಷ್ಣಪ್ಪ ಧರ್ಮರ, ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ, ಲಕ್ಷ್ಮೇಶ್ವರ ಪೊಲೀಸ್ ಸಿಬ್ಬಂದಿಗಳು ಹಾಗೂ ಕೇರಳ ರಿಸರ್ವ್ ಪೊಲೀಸ್ ಸಿಬ್ಬಂದಿಗಳು ಇದ್ದರು.

## ಸಂಪಾದಕೀಯ

# ಶ್ರಮಿಕರ ದಿನಕ್ಕಿಲ್ಲ ಸರಕಾರದ ಆದರ

ಕಾರ್ಮಿಕರು ಮತ್ತು ಕಾರ್ಮಿಕರ ಅವಲಂಬಿತರ ಸಂಖ್ಯೆ ರಾಜ್ಯದ ಒಟ್ಟು ಜನಸಂಖ್ಯೆಯಲ್ಲಿ ಶೇ.40ಕ್ಕೂ ಹೆಚ್ಚಿದೆ. ಆದರೆ, ಕಾರ್ಮಿಕರ ನಾನಾ ಸಮಸ್ಯೆಗಳನ್ನು ಪರಿಹರಿಸಿ ಅವರನ್ನು ಸಮಾಜದ ಮುಖ್ಯವಾಹಿನಿಗೆ ತರುವ ಗಂಭೀರ ಪ್ರಯತ್ನ ಆಗುತ್ತಿಲ್ಲ. ಕಡೇ ಪಕ್ಷ ಕಾರ್ಮಿಕ ದಿನಾಚರಣೆಯನ್ನೂ ಸರಕಾರ ಆಚರಿಸದೆ ಕಾರ್ಮಿಕ ವಲಯಕ್ಕೆ ಅಗೌರವ ತೋರುತ್ತಿದೆ.

ರಾಷ್ಟ್ರ ನಿರ್ಮಾಣದಲ್ಲಿ ಪ್ರಮುಖ ಪಾತ್ರ ವಹಿಸುವ ಕಾರ್ಮಿಕರಿಗೆ ರಾಜ್ಯದಲ್ಲಿ ಕನಿಷ್ಠ ಗೌರವವೂ ಸಲ್ಲುತ್ತಿಲ್ಲ. ಕಾರ್ಮಿಕರ ಸಮಸ್ಯೆ ಆಲಿಸಿ ಪರಿಹಾರ ಸೂಚಿಸುವ ನಿಟ್ಟಿನಲ್ಲಿ ಮಹತ್ವದ್ದಾಗಿರುವ ಕಾರ್ಮಿಕ ದಿನಾಚರಣೆ ರಾಜ್ಯ ಸರಕಾರದಿಂದ ನಡೆಯುತ್ತಿಲ್ಲ.

ಸಣ್ಣ, ಮಧ್ಯಮ ಕೈಗಾರಿಕೆಗಳಲ್ಲಿ ಕೆಲಸ ಮಾಡುವವರು, ಆಟೋ ರಿಕ್ಷಾ ಚಾಲಕರು, ಕಟ್ಟಡ ನಿರ್ಮಾಣದಲ್ಲಿ ತೊಡಗಿರುವವರು, ನಾನಾ ಸಂಘ, ಸಂಸ್ಥೆ, ಸರಕಾರಿ ಕಚೇರಿಗಳಲ್ಲಿ ಗುತ್ತಿಗೆ ಆಧಾರದಲ್ಲಿ ಕೆಲಸ ಮಾಡುವವರು ಸೇರಿದಂತೆ 25 ಲಕ್ಷಕ್ಕೂ ಹೆಚ್ಚು ಸಂಘಟಿತ ಮತ್ತು ಅಸಂಘಟಿತ ವಲಯದ ಕಾರ್ಮಿಕರಿದ್ದಾರೆ.

ಸರಕಾರ ಕಾರ್ಮಿಕರ ಅಭಿವೃದ್ಧಿಗಾಗಿ ನಾನಾ ಯೋಜನೆಗಳನ್ನು ಜಾರಿಗೊಳಿಸಿದೆ. ಅನ್ ಸ್ಕಿಲ್ಡ್ ಕಾರ್ಮಿಕರಿಗೆ ಮಾಸಿಕ ಕನಿಷ್ಠ 14 ಸಾವಿರ ರೂ. ವೇತನ, ಕಾರ್ಮಿಕರ ಮಕ್ಕಳಿಗೆ ಶಿಕ್ಷಣಕ್ಕೆ ಸಹಾಯಧನ, ಮಹಿಳಾ ಕಾರ್ಮಿಕರಿಗೆ ಹೆರಿಗೆ ಭತ್ಯೆ, ಕಾರ್ಮಿಕರ ಪಿಂಚಣಿ ಯೋಜನೆ ಮೊದಲಾಗಿ ಹತ್ತಾರು ಯೋಜನೆಗಳೇನೋ ಇವೆ. ಆದರೆ ಬಹಳಷ್ಟು ಅರ್ಹ ಕಾರ್ಮಿಕರಿಗೆ ಇವುಗಳ ಸೌಲಭ್ಯ ಸಿಗುತ್ತಿಲ್ಲ.

ಅನೇಕ ಕೈಗಾರಿಕೆಗಳು, ಸರಕಾರಿ ಇಲಾಖೆಗಳ ಗುತ್ತಿಗೆ ಆಧಾರದ ಕಾರ್ಮಿಕರಿಗೆ ಸರಕಾರಿ ರಜಾ ದಿನಗಳಂದು ವೇತನ ಸಹಿತ ರಜೆ ನೀಡಬೇಕು ಎಂಬ ನಿಯಮವಿದೆ. ಆದರೆ, ಕಾರ್ಮಿಕರಿಗೆ ಸರಕಾರಿ ರಜಾ ದಿನಗಳ ಸಂಬಳ ಕಡಿತಗೊಳಿಸಿ ತಿಂಗಳಿಗೆ ಒಟ್ಟು 20-22 ದಿನಗಳ ವೇತನ ನೀಡಲಾಗುತ್ತಿದೆ. ಸರಕಾರದ ಯೋಜನೆಗಳು ಪರಿಣಾಮಕಾರಿಯಾಗಿ ಜಾರಿಯಾಗುತ್ತಿಲ್ಲ.

ಕಾರ್ಮಿಕರಿಗೆ ತಮ್ಮ ವೃತ್ತಿಯ ಬಗ್ಗೆ ಹೆಮ್ಮೆ ಮೂಡುವ ನಿಟ್ಟಿನಲ್ಲಿ ಕಾರ್ಮಿಕರ ದಿನಾಚರಣೆಯನ್ನು ಹಬ್ಬದ ರೂಪದಲ್ಲಿ ಆಚರಿಸುವ ಮೂಲಕ ಕಾರ್ಮಿಕ ವಲಯಕ್ಕೆ ಸೂಕ್ತ ಗೌರವವನ್ನು ನೀಡಬೇಕಿದೆ. ಆದರೆ, ಕರ್ನಾಟಕ ರಾಜ್ಯ ಸರಕಾರ ಕಾರ್ಮಿಕ ದಿನಾಚರಣೆಯ ದಿನ ರಜೆ ನೀಡುವುದಕ್ಕೆ ಮಾತ್ರ ಸೀಮಿತಗೊಳಿಸಿದೆ.

ವಿಪರ್ಯಾಸವೆಂದರೆ ಸರಕಾರಿ ಇಲಾಖೆಯ ಅಧಿಕಾರಿಗಳು ಕಾರ್ಮಿಕರ ದಿನಾಚರಣೆಯ ಹೆಸರಿನಲ್ಲಿ ರಜೆಯ ಮಜಾ ಸವಿದರೆ ರಿಕ್ಷಾ ಚಾಲಕರು, ಕಟ್ಟಡ ನಿರ್ಮಾಣ, ಹಮಾಲಿ ಕಾರ್ಮಿಕರು ಮೊದಲಾಗಿ ಅಸಂಘಟಿತ ವಲಯದ ಲಕ್ಷಾಂತರ ಕಾರ್ಮಿಕರಿಗೆ ಕಾರ್ಮಿಕ ದಿನಾಚರಣೆಯ ಅರಿವೂ ಇಲ್ಲದೆ ದಿನನಿತ್ಯದಂತೆ ಬೆವರು ಸುರಿಸಿ ದುಡಿಯುತ್ತಿರುತ್ತಾರೆ.

### ಕಾಂಗ್ರೆಸ್‌ನವರು ಲಂಬಾಣಿ ಸಮುದಾಯದ ಮೀಸಲಾತಿ ಕಡಿತಗೊಳಿಸಿದ್ದಾರೆ: ಬಸವರಾಜ ಬೊಮ್ಮಾಯಿ

# ಲಂಬಾಣಿ ಸಮುದಾಯದ ಸಹೋದರನಾಗಿ ನಿಮ್ಮ ಜೊತೆಗಿರುವೆ

**■ವಿಜಯಸಾಕ್ಷಿ ಸುದ್ದಿ, ಹಾವೇರಿ**

ಕಾಂಗ್ರೆಸ್ ನವರು ಲಂಬಾಣಿ ಸಮುದಾಯದ ಮೀಸಲಾತಿಯನ್ನು ಕಡಿಮೆ ಮಾಡಿದ್ದಾರೆ. ನಾನು ನಿಮ್ಮ ಸಹೋದರನಾಗಿ ಸಮುದಾಯಕ್ಕೆ ಸಿಗಬೇಕಾದ ನ್ಯಾಯಯುತ ಮೀಸಲಾತಿ ಕೊಡಿಸಲು ಬದ್ಧನಾಗಿದ್ದೇನೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಅವರು ಬಂಜಾರ ಸಮುದಾಯದ ಕೃಷ್ಣಾಪುರ ಮಠದ ಆವರಣದಲ್ಲಿ ಲಂಬಾಣಿ ಸಮುದಾಯದ ಸಮಾವೇಶ ಉದ್ಘಾಟಿಸಿ ಮಾತನಾಡಿದರು.

ಪ್ರಜಾಪ್ರಭುತ್ವದಲ್ಲಿ ಅತ್ಯಂತ ಕಟ್ಟಕಡೆಯ ಸಮಾಜದ ಧ್ವನಿ ಕೇಳಬೇಕು. ಅದು ಕೇಳಲು ಸಮಾಜ ಸಂಘಟನೆ ಆಗಬೇಕು.

ಈ ಸಮಾಜ ದೇವರ ವರದಾನ ಇರುವ ಸಮಾಜ, ಸಂತ ಸೇವಾಲಾಲ್ ಅವರ ಅಶೀರ್ವಾದ ಇರುವ ಸಮಾಜ, ಅತ್ಯಂತ ಕಷ್ಟದಲ್ಲಿರುವ ಜನರು ನೀವು. ನೀವು ಬಹಳ ಕಷ್ಟಪಟ್ಟು ನಿಮ್ಮ ಮಕ್ಕಳನ್ನು ವಿದ್ಯಾವಂತರನ್ನಾಗಿ ಮಾಡಿದ್ದೀರಿ, ಅವರಿಗೆ ಅವಕಾಶ ಕೊಟ್ಟರೆ ದೊಡ್ಡ ಸ್ಥಾನಗಳನ್ನು ಪಡೆಯುತ್ತಾರೆ. ಸರ್ಕಾರ ಕೈ ಹಿಡಿದರೆ ಈ ಸಮುದಾಯದ ಯುವಕರು ಉನ್ನತ ಸ್ಥಾನ ಪಡೆಯುತ್ತಾರೆ ಎಂದರು.

ದೇಶದ ಎಲ್ಲ ಭಾಗಗಳಲ್ಲಿ ಇರುವ ಕೆಲವೇ ಕೆಲವು ಸಮುದಾಯಗಳಲ್ಲಿ ಬಂಜಾರ ಸಮುದಾಯವೂ ಒಂದು. ಈ ಸಮುದಾಯ ಮುಂದೆ ಬರಲು ವಿದ್ಯೆ ಮತ್ತು ಉದ್ಯೋಗದಲ್ಲಿ ಅವಕಾಶ ದೊರೆಯಬೇಕು. ಈ ಸಮುದಾಯ ಅಂಬೆಡ್ಕರ್ ಅವರನ್ನು ನೆನಪಿಡಬೇಕು. ಅಂಬೇಡ್ಕರ್ ಅವರು ಎಸ್ಸಿ ಎಸ್ಟಿಗೆ ವಿಶೇಷ ಮೀಸಲಾತಿ ನೀಡಿ ಅವಕಾಶ ಕೊಟ್ಟರು. ಬಂಜಾರಾ ಸಮಾಜವನ್ನು ಎಸ್ಸಿಗೆ ಸೇರಿಸಿದ್ದು ದೇವರಾಜ ಅರಸರು. ಈ ರಾಜ್ಯದಲ್ಲಿ ಸಾಮಾಜಿಕ ನ್ಯಾಯದ ಹರಿಕಾರರು ದೇವರಾಜ ಅರಸರು ಮಾತ್ರ ಎಂದರು.

ಕಾಂಗ್ರೆಸ್ ನ ಒಬ್ಬ ನಾಯಕರು ಬಂಜಾರ ಸಮುದಾಯವನ್ನು ಎಸ್ಸಿ ಪಟ್ಟಿಯಿಂದ ಕೈ ಬಿಡಬೇಕು ಎಂದು ಸುಪ್ರೀಂ ಕೋರ್ಟ್ ಗೆ ಹೋಗಿದ್ದರು. ಸುಪ್ರೀಂ ಕೋರ್ಟ್ ರಾಜ್ಯ ಸರ್ಕಾರದ ಅಭಿಪ್ರಾಯ ಕೇಳಿತ್ತು. ನಾನು ಸಮುದಾಯದ ಬಗ್ಗೆ ಮೈಸೂರು ಮಹಾರಾಜರ ಕಾಲದಿಂದ ಸಂಪೂರ್ಣ ಅಧ್ಯಯನ ಮಾಡಿ ಈ ಸಮುದಾಯ ಎಸ್ಸಿಯಲ್ಲಿ ಇರಬೇಕು ಎಂದು ಆದೇಶ ಮಾಡಿದ್ದೇನೆ. ಅದು ಸುಪ್ರೀಂ ಕೋರ್ಟ್ ನಲ್ಲಿ ವಿಚಾರಣೆ ನಡೆಯುತ್ತಿದೆ ಎಂದರು.

ಹಾವೇರಿ ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಸಮಾವೇಶಕ್ಕೂ ಮುನ್ನ ಬಂಜಾರ ಸಮುದಾಯದ ಸ್ವಾಮೀಜಿ ಮಹಾನ್ ತಪಸ್ವಿ ಡಾ. ಶ್ರೀ ಕುಮಾರ ಮಹಾರಾಜರ ಆಶೀರ್ವಾದ ಪಡೆದರು.

ಸಮಾವೇಶದಲ್ಲಿ ಶಾಸಕ ಡಾ. ಚಂದ್ರು ಲಮಾಣಿ, ಮಾಜಿ ಶಾಸಕ ಬಸವರಾಜ ನಾಯಕ್ , ಹಾವೇರಿ ಬಿಜೆಪಿ ಮುಖಂಡ ಗವಿಸಿದ್ದಪ್ಪ, ಶಿವಣ್ಣ ಲಮಾಣಿ, ಹನುಮಂತಪ್ಪ ಲಮಾಣಿ, ಮಲ್ಲೇಶಪ್ಪ ಲಮಾಣಿ, ರಮೇಶ ಲಮಾಣಿ, ಪುಂಡಲಿಕ್ ಲಮಾಣಿ, ಜಿಲ್ಲಾ ಪಂಚಾಯತಿ ಮಾಜಿ ಸದಸ್ಯೆ ಲಲಿತಾ ಲಮಾಣಿ ಸೇರಿದಂತೆ ಹಲವು ಮುಖಂಡರು ಹಾಜರಿದ್ದರು.



**ತಾಂಡಾ ಅಭಿವೃದ್ಧಿ ಗೆ ಬಿಜೆಪಿ ಕಾರಣ**

ಲಂಬಾಣಿ ತಾಂಡಾಗಳ ಅಭಿವೃದ್ದಿಗೆ ಬಿಜೆಪಿ ಕಾರಣ. ಯಡಿಯೂರಪ್ಪ ಸಿಎಂ ಆಗಿದ್ದಾಗ ತಾಂಡಾ ಅಭಿವೃದ್ಧಿ ನಿಗಮ ಮಾಡಿದ್ದೇವೆ. ನಾವು ಲಂಬಾಣಿ ಸಮುದಾಯದ ಮೀಸಲಾತಿಯನ್ನು 4.5 ಕ್ಕೆ ಹೆಚ್ಚಿಗೆ ಮಾಡಿದ್ದೇವೆ. ಕಾಂಗ್ರೆಸ್ ಅದನ್ನು 3% ಕ್ಕೆ ಇಳಿಸಿದೆ. ಈ ಬಗ್ಗೆ ಕಾಂಗ್ರೆಸ್ ನಾಯಕರನ್ನು ಪ್ರಶ್ನಿಸಬೇಕು ಎಂದು ಹೇಳಿದರು.


ಎಲ್ಲಾ ತಾಂಡಾಗಳು ಕಂದಾಯ ಗ್ರಾಮಗಳಾಗಿ ಪರಿವರ್ತನೆ ಆಗಬೇಕು. ಕೇಂದ್ರ ರಾಜ್ಯದ ಎಲ್ಲ ಯೋಜನೆಗಳು ತಾಂಡಾಗಳಿಗೆ ಬರಬೇಕು ಇದು ನನ್ನ ಬದ್ದತೆ. ನಾನು ಬಂಜಾರ ಸ್ವಾಮೀಜಿ ಶ್ರೀ ಕುಮಾರ ಮಹಾರಾಜರ ಆಶೀರ್ವಾದ ಪಡೆದಿದ್ದೇನೆ. ಅವರು ಸಮಾಜದ ಅಭಿವೃದ್ಧಿ ಆಗಬೇಕು ಅಂತ ಹೇಳಿದ್ದಾರೆ. ನಾನು ಈ ಸಮುದಾಯದ ಸಹೋದರನಾಗಿ ಜೊತೆಯಲ್ಲಿರುತ್ತೇನೆ. ವಿಶೇಷವಾಗಿ ತಾಯಂದಿರು ಮುಖ್ಯವಾಹಿನಿಗೆ ಬರಬೇಕು. ನಿಮ್ಮ ಕೌಶಲ್ಯವನ್ನು ವಿಶ್ವಕ್ಕೆ ಪರಿಚಯಿಸಿ, ವಿಶೇಷ ಕಾರ್ಯಕ್ರಮ ರೂಪಿಸಿ ನಿಮ್ಮ ಆದಾಯ ಹೆಚ್ಚಳ ಮಾಡುವ ಎಲ್ಲ ಪ್ರಯತ್ನ ಮಾಡುತ್ತೇನೆ. ನಿಮ್ಮ ಸಹೋದರನಾಗಿ ಲೋಕಸಭೆಯಲ್ಲಿ ಧ್ವನಿ ಎತ್ತುತ್ತೇನೆ ಎಂದು ಹೇಳಿದರು.

# ದೇಶದ ಜನರ ಬದುಕು ಸುಧಾರಿಸುವ ಗ್ಯಾರಂಟಿ

**■ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯ ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳು ರಾಜ್ಯದ ಜನರನ್ನು ಸಂಕಷ್ಟಗಳಿಂದ ಪಾರು ಮಾಡಿ ನೆಮ್ಮದಿಯಿಂದ ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಸಹಾಯ ಮಾಡಿವೆ. ಇದೇ ರೀತಿಯಲ್ಲಿ ಕಾಂಗ್ರೆಸ್ ಲೋಕಸಭಾ ಚುನಾವಣೆಯ ಪ್ರಣಾಳಿಕೆಯಲ್ಲಿ ಘೋಷಿಸಲಾಗಿರುವ ಗ್ಯಾರಂಟಿ ಯೋಜನೆಗಳೂ ಕೂಡ ದೇಶದ ಜನರ ಬದುಕು ಸುಧಾರಿಸುವ ಜೊತೆಗೆ ದೇಶದ ಆರ್ಥಿಕತೆಯನ್ನೂ ಸುಧಾರಿಸಲಿದೆ ಎಂದು ಕೆಪಿಸಿಸಿ ಉಪಾಧ್ಯಕ್ಷ ಡಿ.ಆರ್. ಪಾಟೀಲ ಹೇಳಿದರು.

ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಪರವಾಗಿ ನಗರದ ರಾಜೀವಗಾಂಧಿನಗರದ ವಾರ್ಡ್ ನಂ 26, 29ರಲ್ಲಿ ನಡೆಸಿದ ಪ್ರಚಾರ ಸಭೆಯಲ್ಲಿ ಅವರು ಮಾತನಾಡಿದರು.




ಈ ಸಂದರ್ಭದಲ್ಲಿ ಗದಗ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಾಬರ್ಚಿ, ಮಾಜಿ ಶಾಸಕ ಜಿ. ಎಸ್. ಗಡ್ಡದೇವರಮಠ, ಚಂದಾವರಿ ಅವರು ಸೇರಿದಂತೆ ಅನೇಕ ಸ್ಥಳೀಯ ಮುಖಂಡರು, ನಾಯಕರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಮೆಕಾನಿಕಲ್ ಅಸೋಸಿಯೇಷನ್ ಗದಗ ಜಿಲ್ಲಾ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೃಷ್ಣಗೌಡ ಪಾಟೀಲ ಅವರು ಮೆಕಾನಿಕಲ್ ಅಸೋಸಿಯೇಷನ್ ಸದಸ್ಯರೊಂದಿಗೆ ಸಭೆ ನಡೆಸಿ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರ ಪರವಾಗಿ ಮತಯಾಚಿಸಿದರು. ಪಕ್ಷದ ಮುಖಂಡರು ಹಾಗೂ ಅಸೋಸಿಯೇಷನ್ ಸದಸ್ಯರು ಉಪಸ್ಥಿತರಿದ್ದರು.

ನಂತರ ನಗರದ ಕೆಎಸ್ಆರ್‌ಟಿಸಿ ಕಾಲೋನಿ ಹಾಗೂ ಜಿಲ್ಲೆಯ ಕಳಸಾಪೂರ, ಪಾಂಡುರಂಗ ನಗರ (ಕಳಸಾಪೂರ ತಾಂಡಾ)ದಲ್ಲಿ ಗಡ್ಡದೇವರಮಠ ಅವರ ಪರವಾಗಿ ಕೃಷ್ಣಗೌಡ ಪಾಟೀಲ ಪ್ರಚಾರ ಸಭೆ ನಡೆಸಿ ಮತಯಾಚನೆ ಮಾಡಿದರು. ಈ ಸಂದರ್ಭದಲ್ಲಿ ಸ್ಥಳೀಯ ಮುಖಂಡರು, ಗ್ರಾಮದ ಹಿರಿಯರು ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಉಪಸ್ಥಿತರಿದ್ದರು.

### ಸರ್.ಎಂ. ವಿಶ್ವೇಶ್ವರಯ್ಯ ಸಿವ್ಹಿಲ್ ಕನ್ಸಲ್ಟಂಟ್ಸ್-ಇಂಜನಿಯರ್ಸ್ ಫೋರಂನ ದ್ವಿತೀಯ ವಾರ್ಷಿಕೋತ್ಸವ

# ಫೋರಂನ ಸದಸ್ಯರು ಮನಸ್ಸುಗಳನ್ನೂ ಕಟ್ಟುತ್ತಿದ್ದಾರೆ

**■ವಿಜಯಸಾಕ್ಷಿ ಸುದ್ದಿ, ಗದಗ**

ವಿಶ್ವೇಶ್ವರಯ್ಯ ಇಂಜಿನಿಯರ್ಸ್ ಫೋರಂನ ಎಲ್ಲ ಸದಸ್ಯರು ಕೇವಲ ಮನೆಗಳನ್ನಷ್ಟೇ ಕಟ್ಟುವದಿಲ್ಲ. ಅದರೊಂದಿಗೆ ಮನಸ್ಸುಗಳನ್ನು ಕಟ್ಟುವ ಕೆಲಸ ಮಾಡುತ್ತಿದ್ದಾರೆ. ಪ್ರತಿಭಾ ಪುರಸ್ಕಾರ, ಕಾರ್ಮಿಕರಿಗೆ ಸನ್ಮಾನ, ಹಿರಿಯ ನಾಗರಿಕರಿಗೆ ಸನ್ಮಾನ ಹಾಗೂ ಮಕ್ಕಳಿಗಾಗಿ ಮನರಂಜನೆ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುವದು ಪ್ರಶಂಸನೀಯ ಎಂದು ಶ್ರೀ ಗುರು ಕೊಟ್ಟೂರೇಶ್ವರ ಮಠದ ಪೀಠಾಧಿಪತಿಗಳಾದ ಶ್ರೀ.ಮ.ನಿ. ಪ್ರ.ಅಭಿನವ ಡಾ. ಕೊಟ್ಟೂರೇಶ್ವರ ಮಹಾಸ್ವಾಮಿಗಳು ನುಡಿದರು.

ನಗರದ ಶ್ರೀ ಕೆ.ಎಚ್. ಪಾಟೀಲ ಸಭಾಭವನದಲ್ಲಿ ಸರ್ ಎಂ.ವಿಶ್ವೇಶ್ವರಯ್ಯ ಸಿವ್ಹಿಲ್ ಕನ್ಸಲ್ಟಂಟ್ಸ್ & ಇಂಜಿನಿಯರ್ಸ್ ಫೋರಂನ ಫೋರಂನ ದ್ವಿತೀಯ ವಾರ್ಷಿಕೋತ್ಸವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.



ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್‌ಆರ್ಕಿಟೆಕ್ಟ್ಸ್ ಹುಬ್ಬಳ್ಳಿ-ಧಾರವಾಡ ಸೆಂಟರ್‌ನ ಅಧ್ಯಕ್ಷ ಆರ್. ಅನೂಪಕುಮಾರ ಗುಪ್ತಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಇಷ್ಟು ಕಡಿಮೆ ಅವಧಿಯಲ್ಲಿ ಫೋರಂನ ಸಾಧನೆ ಹಾಗೂ ಸಮಾಜಮುಖಿ ಕಾರ್ಯಗಳನ್ನು ನೋಡಿದರೆ ನಮಗೆ ಹೆಮ್ಮೆ ಎನಿಸುತ್ತದೆ. ಮುಂದಿನ ದಿನಗಳಲ್ಲಿ ಗದಗಜಿಲ್ಲೆಯ ಪುರಾತನ ದೇವಾಲಯಗಳನ್ನು ಜೀರ್ಣೋದ್ಧಾರ ಕಾರ್ಯ ಕೈಗೆತ್ತಿಕೊಳ್ಳೋಣ ಎಂಬ ಆಶಯ ವ್ಯಕ್ತಪಡಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಇಂ. ಬೂದೇಶ ಎಂ.ಬ್ಯಾಹಟ್ಟಿ, ಪ್ರೊಫೆಸರ್ ಇಂ. ಭರತಕುಮಾರ ಪಾಟೀಲ ಮಾತನಾಡಿದರು. ಫೋರಂನ ಉಪಾಧ್ಯಕ್ಷ ಇಂ. ಅಮರನಾಥ ಮಲ್ಲಾಡದ, ಇಂ. ಅಷ್ಫಕ್‌ಅಲಿ ಹೊಸಳ್ಳಿ ವೇದಿಕೆ ಮೇಲೆ ಉಪಸ್ಥಿತರಿದ್ದರು. ಇಂ. ಪ್ರವೀಣ ಕಲ್ಮನಿ ಪ್ರಾಸ್ತಾವಿಕವಾಗಿ ಮಾತನಾಡಿದರು, ಇಂ, ಶಿವಕುಮಾರ ಪಟ್ಟಣಶೆಟ್ಟಿ ಸ್ವಾಗತಿಸಿದರು. ಪ್ರಾಧ್ಯಾಪಕ ಬಾಹುಬಲಿ ಜೈನರ್ ನಿರೂಪಿಸಿ ವಂದಿಸಿದರು.

ಪ್ರತಿಷ್ಠಿತ ಕಂಪನಿಗಳಾದ ಅಲ್ಟ್ರಾಟೆಕ್ ಸಿಮೆಂಟ್, ನಿಪ್ಪೋನ್ ಪೇಂಟ್ಸ್, ಜೆ.ಎಸ್.ಡಬ್ಲೂ ಸ್ಟೀಲ್ಸ್ ಹಾಗೂ ಗದಗ-ಬೆಟಗೇರಿ ಅವಳಿ ನಗರದ ಕಟ್ಟಡ ನಿರ್ಮಾಣ ಸಾಮಗ್ರಿಗಳ ವ್ಯಾಪಾರಸ್ಥರಾದ ಜೈನ್ ಸ್ಟೀಲ್ಸ್, ವಿಶಾಲ ಸ್ಟೀಲ್ಸ್ & ಸಿಮೆಂಟ್ಸ್, ಬಾಲಾಜಿ ಟೈಲ್ಸ್, ವರ್ಧಮಾನ ಇಲೆಕ್ಟ್ರಿಕಲ್ಸ್, ಸಫಾ ಸಿರಾಮಿಕ್ಸ್, ಸುಭಾಸ ಹಾರ್ಡವೇರ್ & ಪ್ಲೈವುಡ್ಸ್, ಬ್ಯಾಲಿಹಾಳ ಹಾರ್ಡವೇರ್, ಜೆ.ಕೆ. ಸಿಮೆಂಟ್ (ಸ್ಕ್ವೇರ್ ಕನ್‌ಸ್ಟ್ರಕ್ಷನ್), ಪವನ ಟ್ರೇಡರ್ಸ್, ದಾವಲ್ಮಲಿಕ್ ಟ್ರೇಡರ್ಸ್, ಜೆಎಂಜೆ ವರ್ಡ್ ಸ್ಪೋರ್ಟ್ಸ್ ಅಸೋಸಿಯೇಶನ್ ಇವರ ಸಹಯೋಗದಲ್ಲಿ ಕಾರ್ಯಕ್ರಮ ಆಯೋಜನೆಗೊಂಡಿತ್ತು.

# ವ್ಯಕ್ತಿಯ ಸದೃಢತೆಗೆ ಪೌಷ್ಟಿಕ ಆಹಾರ ಅಗತ್ಯ



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ದೈಹಿಕವಾಗಿ, ಮಾನಸಿಕವಾಗಿ ಸದೃಢರಾಗಲು ಪೌಷ್ಟಿಕಯುಕ್ತ ಆಹಾರ ಅಗತ್ಯ. ಉತ್ತರ ಕರ್ನಾಟಕ ರೊಟ್ಟಿ, ರಟ್ಟೆ ಬಲು ಗಟ್ಟಿ ಎಂದು ಉದ್ಯಮಿ ಸಂದೀಪ ಭಂಡಾರಿ ಹೇಳಿದರು.

ಅವರು ಪಟ್ಟಣದ ಸಮರ್ಥ ಉತ್ತರ ಕರ್ನಾಟಕ ರೊಟ್ಟಿ ಕೇಂದ್ರದ 5ನೇ ವರ್ಷದ ಸಂಭ್ರಮಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿ, ಇಂದಿನ ಆಧುನಿಕ ತಂತ್ರಜ್ಞಾನದ ಯುಗದಲ್ಲಿ ಆಹಾರ ಪದ್ಧತಿಗಳು ಬದಲಾವಣೆಯಾಗುತ್ತಿದ್ದು, ನಮ್ಮ ಪೂರ್ವಜರು ತಮ್ಮ ದೈಹಿಕ ಹಾಗೂ ಮಾನಸಿಕ ಆರೋಗ್ಯಕ್ಕಾಗಿ ತಮ್ಮ ಮುಖ್ಯ ಆಹಾರ ಪದಾರ್ಥಗಳನ್ನು ಬೆಳೆಯುವುದರ ಜೊತೆಯಲ್ಲಿ ಅವುಗಳ ಬಳಕೆಗಳಿಗೆ ಹೆಚ್ಚು ಪ್ರಾಮುಖ್ಯತೆ ಕೊಡುತ್ತಿದ್ದರು. ಇಂದು ನಾವೆಲ್ಲರೂ ಹಣದ ಹಿಂದೆ ಬಿದ್ದು ನಮ್ಮ ಆಹಾರ ಪದ್ಧತಿಯನ್ನು ಮರೆತು ನಮ್ಮ ಆರೋಗ್ಯವನ್ನು ನಾವೇ ಹಾಳು ಮಾಡಿಕೊಳ್ಳುತ್ತಿದ್ದೇವೆ ಎಂದರು.

ಡಾ. ಎಸ್.ಸಿ. ಚವಡಿ ಮಾತನಾಡಿ, ನಮ್ಮ ಉತ್ತರ ಕರ್ನಾಟಕದ ಮುಖ್ಯ ಆಹಾರ ರೊಟ್ಟಿಯಾಗಿದ್ದು, ಇಂದು ನಮ್ಮ ಕೆಲಸದ ಒತ್ತಡದಲ್ಲಿ ನಮ್ಮ ಆರೋಗ್ಯ, ನಮ್ಮ ಆಹಾರ ಪದ್ಧತಿಗಳನ್ನು ಮರೆತು ತಿಂಡಿ ತಿನಿಸುಗಳಿಗೆ ಮಾರುಹೋಗಿ ನಮ್ಮ ಆರೋಗ್ಯವನ್ನು ನಾವೇ ಹಾಳು ಮಾಡಿಕೊಳ್ಳುತ್ತಿದ್ದೇವೆ. ಉತ್ತರ ಕರ್ನಾಟಕದ ಆಹಾರ ಉಳಿಸಿ ಬೆಳೆಸುವ ಕಾರ್ಯ ಮಾಡುತ್ತಿರುವ ಸಮರ್ಥ ಉತ್ತರ ಕರ್ನಾಟಕ ಆಹಾರ ಕೇಂದ್ರದ ಕಾರ್ಯ ಶ್ಲಾಘನೀಯ ಎಂದರು.

ಅಧ್ಯಕ್ಷತೆಯನ್ನು ಗೌರಮ್ಮಾ ಬಡ್ನಿ ವಹಿಸಿದ್ದರು. ಪ.ಪಂ ಸದಸ್ಯ ಎಸ್.ಸಿ. ಬಡ್ನಿ, ಮಂಗಳಾ ನೀಲಗುಂದ, ರಾಜೇಶ್ವರಿ ಬಡ್ನಿ, ಶಿವಬಸವ ಹಸಬಿ, ಈರಯ್ಯ ಹಿರೇಮಠ, ಎಸ್.ಎಂ. ಉಜ್ಜಣ್ಣವರ, ಗಣೇಶ ವಂಟಕರ್, ಮಾಹಾಂತೇಶ ನಪೂರಿಮಠ, ಶರಣಪ್ಪ ಬಾಳಿಕಾಯಿ, ಮಂಜುನಾಥ ಮಟ್ಟಿ, ನೀಲಕಂಠಯ್ಯ ಗವಿಮಠ ಇದ್ದರು.




ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಗದಗ ಸ್ವೀಪ್ ಸಮಿತಿ ಹಾಗೂ ಗದಗ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಏರ್ಪಡಿಸಿದ್ದ ಮತದಾನ ಜಾಗೃತಿ ಕಾರ್ಯಕ್ರಮದ ಅಂಗವಾಗಿ ಬೈಕ್ ರ್‍ಯಾಲಿ ಮತ್ತು ವಿದ್ಯಾರ್ಥಿಗಳ ಪ್ರಬಾತಪೇರಿಯನ್ನು ಗದಗ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಜಿ.ಪಂ ಸಿಇಓ ಎಸ್. ಭರತ, ಗದಗ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಹಾಗೂ ರಾಜ್ಯ ಸರಕಾರಿ ನೌಕರ ಸಂಘದ ರಾಜ್ಯ ಉಪಾಧ್ಯಕ ರವಿ ಗುಂಜೀಕರ, ಗೌರವಾಧ್ಯಕ್ಷರು ಹಾಗೂ ತಾಲೂಕು ಅಧಿಕಾರಿ ಡಾ. ಬಸವರಾಜ ಬಳ್ಳಾರಿ, ಮಲ್ಲಿಕಾರ್ಜುನ ಹನಸಿ ಸೇರಿದಂತೆ ಹಲವರಿದ್ದರು.

# ಗೆಲುವಿಗೆ ಆಶೀರ್ವದಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಕೃಷಿ ಮತ್ತು ಉದ್ಯಮದಲ್ಲಿ ಅನುಭವ ಹೊಂದಿರುವ ನನಗೆ ತಮ್ಮ ಪ್ರಗತಿಯ ಜೊತೆಯಲ್ಲಿ ಹೆಜ್ಜೆ ಹಾಕುವ ಸಂಕಲ್ಪ ಮಾಡಿದ್ದೇನೆ. ಈ ಹಿನ್ನೆಲೆಯಲ್ಲಿ ನನಗೂ ಒಂದು ಬಾರಿ ಅವಕಾಶ ನೀಡಿ ಗೆಲುವಿಗೆ ಆಶೀರ್ವದಿಸಬೇಕೆಂದು ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಮನವಿ ಮಾಡಿದರು.

ನಗರದ ಕೈಗಾರಿಕಾ ಪ್ರದೇಶದಲ್ಲಿ ವಿದ್ಯುತ್ ಗುತ್ತಿಗೆದಾರರ ಸಂಘದ ಸಭೆಯಲ್ಲಿ ಮತಯಾಚಿಸಿ ಮಾತನಾಡಿದ ಅವರು, ನಮ್ಮ ಮಾರ್ಗದರ್ಶಿಗಳಾದ ಎಚ್.ಕೆ. ಪಾಟೀಲರು ಶಾಸಕರಾಗಿ, ಸಚಿವರಾಗಿ ಸಾಕಷ್ಟು ಅಭಿವೃದ್ಧಿ ಕಾರ್ಯ ಮಾಡಿದ್ದಾರೆ. ಅವರ ಸಲಹೆ, ಸೂಚನೆಗಳನ್ನು ಪಾಲಿಸುವೆ. ವಿದ್ಯುತ್ ಗುತ್ತಿಗೆದಾರರ ಸಂಕಷ್ಟಗಳಿಗೂ ಸ್ಪಂದಿಸುವೆ ಎಂದರು.



ವಿದ್ಯುತ್ ಗುತ್ತಿಗೆದಾರರ ಸಂಘದ ನಾಗರಾಜ ಶೆಟ್ರು ಮಾತನಾಡಿದರು. ಮುಖಂಡರಾದ ರಾಜಶೇಖರ ಮೆಣಸಿನಕಾಯಿ, ಬಂಗಾರೇಶ ಹಿರೇಮಠ, ವಿದ್ಯುತ್ ಗುತ್ತಿಗೆದಾರರ ಸಂಘದ ಮಲ್ಲಣ್ಣ ಕಿಂದ್ರಿ, ಶಿವಾನಂದ ಬಾಲಪ್ಪನವರ, ಪ್ರಕಾಶ ಅಂಗಡಿ, ಪ್ರಭು ದಂಡಾವತಿ, ಎಂ.ಎಚ್. ಕುದಾವಂದ, ಐ.ಎಸ್. ನರಗುಂದ, ಶಫಿ ಹನುಮಸಾಗರ ಉಪಸ್ಥಿತರಿದ್ದರು.

# ಕಾಂಗ್ರೆಸ್ ಸರ್ಕಾರ ರಚನೆಗೆ ಕೈಜೋಡಿಸಿ

**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಗರೀಬಿ ಹಟಾವೋ ಅಂದೋಲನದ ಮೂಲಕ ದಿ. ಇಂದಿರಾ ಗಾಂಧಿಯವರು ಬಡವರ ಕಲ್ಯಾಣಕ್ಕಾಗಿ ಹಲವಾರು ಯೋಜನೆಗಳನ್ನು ಜಾರಿಗೆ ತಂದು ಬಡವರ ಏಳ್ಗೆಗೆ ನಾಂದಿ ಹಾಡಿದರು. ಅಂದಿನಿಂದ ಸರ್ವರಿಗೂ ಸಮ ಪಾಲು ಸರ್ವರಿಗೂ ಸಮ ಬಾಳು ಎಂಬ ಧ್ಯೇಯ ವಾಕ್ಯವನ್ನು ಕಾಂಗ್ರೆಸ್ ಪಕ್ಷವು ಪಾಲಿಸುತ್ತಾ ಬಂದಿದೆ ಎಂದು ಜಿ.ಪಂ ಮಾಜಿ ಅಧ್ಯಕ್ಷ, ಕಾಂಗ್ರೆಸ್ ಯುವ ನಾಯಕ ಸಿದ್ದಲಿಂಗೇಶ್ವರ ಪಾಟೀಲ ಹೇಳಿದರು.

ಬಾಗಲಕೋಟ ಲೋಕಸಭಾ ಮತಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸಂಯುಕ್ತಾ ಪಾಟೀಲ ಪರ ಗ್ರಾಮದಲ್ಲಿ ಪ್ರಚಾರ ಕೈಗೊಂಡು ಮಾತನಾಡಿ, ಮನಮೋಹನ ಸಿಂಗ್ ಅವರು ಜಾರಿಗೆ ತಂದ ರಾಷ್ಟ್ರೀಯ ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯಿಂದ ದೇಶದಲ್ಲಿ ರೈತರು, ರೈತ ಕೂಲಿ ಕಾರ್ಮಿಕರಿಗೆ ಅನುಕೂಲವಾಗಿದೆ. ಇಂದು ಬಡ ಕೂಲಿ ಕಾರ್ಮಿಕರು ಕೆಲಸವನ್ನು ಅರಸಿ ಬೇರೆ ಜಿಲ್ಲೆಗೆ ವಲಸೆ ಹೋಗುವುದನ್ನು ತಪ್ಪಿಸಿದೆ. ಗೃಹಲಕ್ಷ್ಮೀ, ಶಕ್ತಿ, ಗೃಹ ಜ್ಯೋತಿ, ಅನ್ನ ಭಾಗ್ಯ, ಯುವ ನಿಧಿ ಯೋಜನೆಯಿಂದ ಬಡವರಿಗೆ ಅನುಕೂಲವಾಗಿದೆ. ಎಚ್.ಕೆ. ಪಾಟೀಲ ಅವರು ಗ್ರಾಮೀಣಾಭಿವೃದ್ಧಿ-ಪಂಚಾಯತ್ ರಾಜ್ ಸಚಿವರಾಗಿದ್ದಾಗ ಗ್ರಾಮದಲ್ಲಿ ಕೆರೆಗಳನ್ನು ತುಂಬಿಸಿದ್ದರಿಂದ ಇಂದು ಬರಗಾಲದ ಸಮಯದಲ್ಲಿಯೂ ಸಹ ಗ್ರಾಮಕ್ಕೆ ಕುಡಿಯುವ ನೀರಿನ ಬರ ಇಲ್ಲದಾಗಿದೆ.



ಆದ್ದರಿಂದ, ಕೇಂದ್ರದಲ್ಲಿ ಕಾಂಗ್ರೆಸ್ ನೇತೃತ್ವದ ಸರಕಾರ ರಚನೆಗೆ ತಾವೆಲ್ಲರೂ ಮತ ನೀಡಿ ಆಶಿರ್ವದಿಸಬೇಕೆಂದು ಉದ್ಯೋಗ ಖಾತ್ರಿ ಕಾಮಗಾರಿಯಲ್ಲಿ ತೊಡಗಿಕೊಂಡ ಕಾರ್ಮಿಕರನ್ನು ಉದ್ದೇಶಿಸಿ ಮಾತನಾಡಿದರು. ಈ ಸಂದರ್ಭದಲ್ಲಿ ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ, ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ತಾ.ಪಂ ಮಾಜಿ ಅಧ್ಯಕ್ಷ ಎಂ.ಎನ್. ಉಮಚಗಿ, ವೀರಯ್ಯ ಗಂಧದ, ನಜೀರಹ್ಮದ ಕೀರಟಗೇರಿ, ಪೀರಸಾಬ ನದಾಫ, ಲಕ್ಷ್ಮಣ ಗುಡಸಲಮನಿ ಮುಂತಾದವರಿದ್ದರು.

# ಸಂಭ್ರಮದ ಶ್ರೀ ದಿಂಗಾಲೇಶ್ವರ ಜಾತ್ರಾ ಮಹೋತ್ಸವ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಇಲ್ಲಿನ ಬಾಲೆಹೊಸೂರ ಗ್ರಾಮದ ಶ್ರೀ ದಿಂಗಾಲೇಶ್ವರ ಮಠದ ಜಾತ್ರಾಮಹೋತ್ಸವ ಅಂಗವಾಗಿ ಮಂಗಳವಾರ ಸಂಜೆ ಸಂಪ್ರದಾಯದಂತೆ ಕಡುಬಿನ ಕಾಳಗ ಕಾರ್ಯಕ್ರಮ ಸಾವಿರಾರು ಭಕ್ತರ ಜಯಘೋಷದ ನಡುವೆ ಶೃದ್ಧಾ ಭಕ್ತಿ ಮತ್ತು ಅದ್ದೂರಿಯಾಗಿ ನೆರವೇರಿತು.

ಶ್ರೀಮಠದ ಪಟ್ಟಾಧ್ಯಕ್ಷರಾದ ಶ್ರೀ ಫಕೀರ ದಿಂಗಾಲೇಶ್ವರ ಮಹಾಸ್ವಾಮಿಗಳು ಕುದರೆಯ ಮೇಲೇರಿ ರಥ ಪ್ರದಕ್ಷಿಣೆ ಹಾಕುತ್ತಾ ಕಡುಬಿನ ಕಾಳಗ ಕಾರ್ಯ ನೆರವೇರಿಸಿದರು. ಶ್ರೀ ಮಠದ ಪ್ರಾಂಗಣ, ರಥ ಬೀದಿಯುದ್ದಕ್ಕೂ ಕುದರೆ ಮೇಲೆ ಕುಳಿತು ಕಡುಬಿನ ಚೂರುಗಳು, ಬೆಂಡು, ಬತ್ತಾಸು, ಬೆಲ್ಲ, ಹಣ್ಣು, ಕಲ್ಲುಸಕ್ಕರೆ, ಉತ್ತತ್ತಿಗಳನ್ನು ಭಕ್ತರತ್ತ ಅತ್ಯಂತ ಉತ್ಸಾಹದಿಂದ ಎಸೆದರು. ಬಾಲೇಹೊಸೂರ ಸೇರಿ ಸುತ್ತಲಿನ ಗ್ರಾಮಗಳ ಅಪಾರ ಭಕ್ತ ಸಮೂಹ ಪ್ರಸಾದದ ಭಾವನೆಯಿಂದ ಆಯ್ದು ಭಕ್ತಿಯಿಂದ ಸ್ವೀಕರಿಸಿದರು. ಶ್ರೀಮಠದ ಜಾತ್ರಾ ಸಮಿತಿಯವರು, ಗ್ರಾಮದ ಮುಖಂಡರು, ಯುವಕರು ಪಾಲ್ಗೊಂಡು ಸಹಕರಿಸಿದರು.

### ಚುನಾವಣಾ ಕರ್ತವ್ಯ ಲೋಪವಾಗದಂತೆ ಕೆಲಸ ಮಾಡಿ: ಚುನಾವಣಾಧಿಕಾರಿ ದಿವ್ಯ ಪ್ರಭು

# ಚುನಾವಣಾ ಪ್ರಕ್ರಿಯೆಯ ಪೂರ್ಣ ತಿಳುವಳಿಕೆ ಪಡೆಯಿರಿ

**■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ಚುನಾವಣಾ ಕಾರ್ಯ ಯಶಸ್ವಿಯಾಗಿ ಪೂರ್ಣಗೊಳ್ಳುವಲ್ಲಿ ಪಿಆರ್‌ಓ ಮತ್ತು ಅವರ ತಂಡಗಳ ಕಾರ್ಯ ಮುಖ್ಯವಾಗಿದ್ದು, ತರಬೇತಿಯಲ್ಲಿ ಇವಿಎಂ ಮತ್ತು ಚುನಾವಣಾ ಪ್ರಕ್ರಿಯೆಗಳ ಬಗ್ಗೆ ಸರಿಯಾದ ತಿಳುವಳಿಕೆ ಪಡೆದು, ಯಾವುದೇ ರೀತಿಯಲ್ಲಿ ಚುನಾವಣಾ ಕರ್ತವ್ಯ ಲೋಪವಾಗದಂತೆ ಕರ್ತವ್ಯ ನಿರ್ವಹಿಸಬೇಕೆಂದು ಚುನಾವಣಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಅವರು ಬುಧವಾರ ಬೆಳಿಗ್ಗೆ ಜಿಲ್ಲೆಯ ವಿವಿಧ ವಿಧಾನಸಭಾ ಮತಕ್ಷೇತ್ರಗಳಲ್ಲಿ ನಡೆಯುತ್ತಿರುವ ಪಿಆರ್‌ಓ ಮತ್ತು ಎಪಿಆರ್‌ಓ, ಪಿಓ 1, ಪಿಈ 2 ಅವರ 2ನೇ ಹಂತದ ತರಬೇತಿ ಕೇಂದ್ರಗಳಿಗೆ ಭೇಟಿ ನೀಡಿ, ನವಲಗುಂದ ಶಂಕರ ಕಾಲೇಜಿನಲ್ಲಿನ ತರಬೇತಿಯಲ್ಲಿ ಭಾಗವಹಿಸಿ, ಮಾತನಾಡಿದರು.

ಚುನಾವಣಾ ಪ್ರಕ್ರಿಯೆಯಲ್ಲಿ ಮತದಾನ ದಿನ ಬಹು ಮುಖ್ಯವಾಗಿದೆ. ಅಂದು ಮತಗಟ್ಟೆ ಅಧ್ಯಕ್ಷಾಧಿಕಾರಿಗಳು ಮತ್ತು ಅವರ ತಂಡ ಮೈ ಎಲ್ಲಾ ಕಣ್ಣಾಗಿಸಿ ಕೆಲಸ ಮಾಡಬೇಕು. ಚುನಾವಣಾ ಆಯೋಗ ನೀಡಿರುವ ಎಲ್ಲ ನಿಯಮಗಳನ್ನು ತಪ್ಪದೇ ಪಾಲಿಸಬೇಕು. ಮತದಾನ ಕೇಂದ್ರಗಳಲ್ಲಿ ಕರ್ತವ್ಯ ನಿರ್ವಹಿಸುವ ಚುನಾವಣಾ ಸಿಬ್ಬಂದಿಗಳಿಗೆ ಜಿಪಿಎಸ್ ಇರುವ



ವಾಹನ ನೀಡಲಾಗುತ್ತದೆ. ಗೊತ್ತುಪಡಿಸಿದ ವಾಹನದಲ್ಲಿ ಮತ್ತು ನಿಗದಿತ ಮಾರ್ಗದಲ್ಲಿ ಸಂಚರಿಸಬೇಕು ಎಂದು ತಿಳಿಸಿದರು.

ಮತದಾನದ ಹಿಂದಿನ ದಿನ ಮತ್ತು ಮತದಾನ ಮುಗಿದ ನಂತರ ಮತಗಟ್ಟೆ ಸಿಬ್ಬಂದಿಗಳು ತಮಗೆ ಗೋತ್ತುಪಡಿಸಿದ ವಾಹನದಲ್ಲಿ ತೆರಳಬೇಕು. ಬೇರೆ ವಾಹನಗಳಲ್ಲಿ ತೆರಳಲು ಅವಕಾಶವಿಲ್ಲ. ಚುನಾವಣೆ ದಿನ ಯಾವುದೇ ಅಹಿತಕರ ಘಟನೆ ಜರುಗದಂತೆ ಮುನ್ನೆಚ್ಚರಿಕೆ ಇರಲಿ. ಚುನಾವಣಾ ಆಯೋಗದ ನಿರ್ದೇಶನದ ಪ್ರಕಾರ ಕರ್ತವ್ಯ ನಿರ್ವಹಿಸಿ ಎಂದು ಅವರು ತಿಳಿಸಿದರು.

ಮತದಾನ ಹೆಚ್ಚಳಕ್ಕೆ ಚುನಾವಣಾ ಆಯೋಗದ ನಿರ್ದೇಶನದಂತೆ ಸ್ವೀಪ್ ಕಾರ್ಯಚಟುವಟಿಕೆಗಳನ್ನು ಜಿಲ್ಲೆಯಾದ್ಯಂತ ನಿರಂತರವಾಗಿ ಹಮ್ಮಿಕೊಳ್ಳಲಾಗಿದೆ. ಮತದಾನ ಜಾಗೃತಿಯಲ್ಲಿ ಸಾರ್ವಜನಿಕರು ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ. ಜಿಲ್ಲಾಡಳಿತವು ಧಾರವಾಡ ಲೋಕಸಭಾ ಮತಕ್ಷೇತ್ರ ವ್ಯಾಪ್ತಿಯಲ್ಲಿ ಮತದಾನ ಪ್ರಮಾಣವನ್ನು ಶೇ.80ಕ್ಕಿಂತ ಹೆಚ್ಚು ಮಾಡುವ ಗುರಿ ಹೊಂದಿದೆ. ಮತಗಟ್ಟೆಗೆ ಬರುವ ಗರ್ಭಿಣಿಯರು, ಹಿರಿಯ ನಾಗರಿಕರು, ವಿಶೇಷಚೇತನರಿಗೆ ಆದ್ಯತೆ ನೀಡಿ, ಬೇಗ ಮತಚಲಾಯಿಸಲು ಅವಕಾಶ ಮಾಡಿ ಎಂದು ತಿಳಿಸಿದರು.

ಮತಗಟ್ಟೆ ವ್ಯಾಪ್ತಿಯಲ್ಲಿ ಅನುಮತಿಸಿದ ವ್ಯಕ್ತಿಗಳನ್ನು ಹೊರತುಪಡಿಸಿ, ಬೇರೆಯವರಿಗೆ ಅವಕಾಶ ನೀಡಬೇಡಿ. ನಿಮಗೆ ಯಾವುದೇ ರೀತಿಯ ತಾಂತ್ರಿಕ ಅಥವಾ ಬೇರೆ ರೀತಿಯ ಸಮಸ್ಯೆಗಳು ಕಂಡುಬಂದಲ್ಲಿ ತಕ್ಷಣ ಸೆಕ್ಟರ್ ಅಧಿಕಾರಿಗೆ ಮಾಹಿತಿ ನೀಡಿ, ಸರಿಪಡಿಸಿಕೊಳ್ಳಿ. ಮತದಾನಕ್ಕೆ ಆಗಮಿಸುವ ಮತದಾರರಿಗೆ ಕುಡಿಯುವ ನೀರು, ನೆರಳು, ಶೌಚಾಲಯ, ಸರತಿ ಸಾಲು ಎಲ್ಲವೂ ವ್ಯವಸ್ಥಿತವಾಗಿ ಲಭಿಸುವಂತೆ ನೋಡಿಕೊಳ್ಳಿ. ನಿಮ್ಮ ಸಹಾಯಕ್ಕೆ ಬಿಎಲ್‌ಓ, ಆಶಾ, ಗ್ರಾಮಲೆಕ್ಕಾಧಿಕಾರಿ ಸೇರಿದಂತೆ ವಿವಿಧ ಸಿಬ್ಬಂದಿಗಳು ಇರುತ್ತಾರೆ. ಮತದಾನವು ಶಾಂತವಾಗಿ, ಮುಕ್ತ ಮತ್ತು ಯಾವುದೇ ಪಕ್ಷಪಾತವಿಲ್ಲದೆ ನಡೆಯುವಂತೆ ಜಾಗೃತಿವಹಿಸಬೇಕೆಂದು ಚುನಾವಣಾಧಿಕಾರಿ ದಿವ್ಯ ಪ್ರಭು ಹೇಳಿದರು.

ಈ ಸಂದರ್ಭದಲ್ಲಿ ನವಲಗುಂದ ಸಹಾಯಕ ಚುನಾವಣಾಧಿಕಾರಿ ದೇವರಾಜ್ ಆರ್, ತರಬೇತಿ ನೋಡಲ್ ಅಧಿಕಾರಿ ಚನ್ನಪ್ಪ ಎ., ತಹಸೀಲ್ದಾರರಾದ ಮಲ್ಲಿಕಾರ್ಜುನ ಹೆಗ್ಗನ್ನವರ, ರಾಜು ಮಾವರಕರ ಸೇರಿದಂತೆ ವಿವಿಧ ಅಧಿಕಾರಿಗಳು, ಸೆಕ್ಟರ್ ಅಧಿಕಾರಿಗಳು ಉಪಸ್ಥಿತರಿದ್ದರು.

# ಸಂಗೀತಾ ಸುಣಗಾರರಿಗೆ ಸನ್ಮಾನ



**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಅಂಬಿಗರ ಚೌಡಯ್ಯ ಸಮಾಜ ಟ್ರಸ್ಟ್ ವತಿಯಿಂದ ರೋಣ ತಾಲೂಕ ಸವಡಿ ಗ್ರಾಮದಲ್ಲಿರುವ ಅಂಬಿಗ ಸಮುದಾಯದ ವಿದ್ಯಾರ್ಥಿನಿ ಸಂಗೀತಾ ಸುಣಗಾರ ದ್ವಿತೀಯ ಪಿಯುಸಿ ವಿಜ್ಞಾನ ವಿಭಾಗದಲ್ಲಿ ಶೇ.93ರಷ್ಟು ಅಂಕ ಗಳಿಸಿ ಸಮುದಾಯಕ್ಕೆ ಕೀರ್ತಿ ತಂದಿರುವ ಹಿನ್ನೆಲೆಯಲ್ಲಿ ಸನ್ಮಾನಿಸಿ ಅಭಿನಂದಿಸಲಾಯಿತು.


ಸಮಾಜ ಟ್ರಸ್ಟ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಂಗಮೇಶ ಹಾದಿಮನಿ ಮಾತನಾಡಿ, ಪ್ರತಿಯೊಬ್ಬ ವಿದ್ಯಾರ್ಥಿ ಓದಿನ ಕಡೆ ಗಮನ ಹರಿಸಿ ಓದಿನ ಜೊತೆಗೆ ಗುರು-ಹಿರಿಯರ ಸಂಸ್ಕೃತಿ ಮುಂದುವರೆಸಿಕೊಂಡು ಹೋಗಿ ಸತತವಾಗಿ ಅಧ್ಯಯನ ಮಾಡಿದರೆ ಗುರಿ ತಲುಪಬಹುದು. ಸಂಗೀತಾ ಸುಣಗಾರರ ಭವಿಷ್ಯ ಉಜ್ವಲವಾಗಲಿ ಎಂದರು.

ಜಿಲ್ಲಾ ಸಂಘಟನಾ ಕಾರ್ಯದರ್ಶಿ ಗುರಪ್ಪ ತಿರ್ಲಾಪುರ ಮಾತನಾಡಿ, ಸಮುದಾಯದ ವಿದ್ಯಾರ್ಥಿಗಳು ಶೈಕ್ಷಣಿಕವಾಗಿ ಉತ್ತಮ ಅಧ್ಯಯನ ಮಾಡಿ ಉನ್ನತ ಸ್ಥಾನ ಪಡೆಯಿರಿ ಎಂದರು. ಅಧ್ಯಕ್ಷತೆಯನ್ನು ಗದಗ ಜಿಲ್ಲಾ ಅಂಬಿಗ ಸಮಾಜ ಟ್ರಸ್ಟ್ ಉಪಾಧ್ಯಕ್ಷ ಪ್ರವೀಣ ನೀಲಣ್ಣವರ ವಹಿಸಿದ್ದರು.

ಈ ಸಂದರ್ಭದಲ್ಲಿ ಸಂಗಪ್ಪ ಸುಣಗಾರ, ಹರೀಶ್ ಬಾರಕೇರ, ರಾಜು ಪೂಜಾರ, ಬಸಪ್ಪ ಮಾರನಬಸರಿ, ಹಣಮಂತಪ್ಪ ಸುಣಗಾರ, ಯಲ್ಲಪ್ಪ ಹೂಗಾರ, ಗುರಯ್ಯ, ಮುತ್ತಪ್ಪ ಇಟಗಿ, ಉಪಸ್ಥಿತರಿದ್ದರು.

### ಬಾಣಾವರದ ಧರ್ಮ ಜಾಗೃತಿ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಧರ್ಮದ ದಾರಿ ನೆಮ್ಮದಿಗೆ ಮೂಲ



**■ವಿಜಯಸಾಕ್ಷಿ ಸುದ್ದಿ, ಬಾಣಾವರ**

ಮನುಷ್ಯ ಜೀವನದಲ್ಲಿ ಸುಖ, ಶಾಂತಿ ಬಯಸುವುದು ಸಹಜ. ಧರ್ಮದ ದಾರಿಯಲ್ಲಿ ನಡೆದಾಗ ಮನುಷ್ಯ ನೆಮ್ಮದಿಯ ಜೀವನ ಪಡೆಯಲು ಸಾಧ್ಯವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು

ಅವರು ಬಾಣಾವರ ಪಟ್ಟಣದಲ್ಲಿ ಶ್ರೀ ಬಾಣೇಶ್ವರ ನೂತನ ದೇವಸ್ಥಾನದ ಉದ್ಘಾಟನೆ, ಪ್ರಾಣ ಪ್ರತಿಷ್ಠಾಪನೆ, ಕಳಸಾರೋಹಣದ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರಂಭದಲ್ಲಿ ಆಶೀರ್ವಚನ ನೀಡುತ್ತಿದ್ದರು.


ಪ್ರಾಚೀನ ಕಾಲದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ತತ್ವ ಸಿದ್ಧಾಂತಗಳನ್ನು ಶರಣರು ಅಚ್ಚ ಕನ್ನಡದಲ್ಲಿ ಜನತೆಗೆ ಮುಟ್ಟಿಸುವ ಕಾರ್ಯವನ್ನು ಮಾಡಿದರು. ಶಿವಪಥವನವರಿವೊಡೆ ಗುರುಪಥ ಮೊದಲು ಎಂದಿದ್ದಾರೆ. ಜಗದ ಕತ್ತಲೆ ಕಳೆಯಲು ಸೂರ್ಯ ಬೇಕು, ಬದುಕಿನ ಕತ್ತಲೆ ದೂರ ಮಾಡಲು ಶ್ರೀ ಗುರು ಬೇಕೇ ಬೇಕು. ಬಾಣಾವರ ಪಟ್ಟಣದ ಇತಿಹಾಸ ಪ್ರಸಿದ್ಧವಾದ ಬಾಣೇಶ್ವರ ದೇವಸ್ಥಾನವನ್ನು ಭವ್ಯವಾಗಿ ಶಿಲಾಮಂಟಪದಿಂದ ನಿರ್ಮಿಸಿ ಇಂದು ಪುನರ್ ಪ್ರತಿಷ್ಠಾಪನೆ ಮಾಡಿರುವುದು ತಮಗೆ ಅತ್ಯಂತ ಸಂತೋಷವನ್ನು ತಂದಿದೆ ಎಂದ ಜಗದ್ಗುರುಗಳು ಇದಕ್ಕಾಗಿ ಶ್ರಮಿಸಿದ ಸಮಿತಿಯ ಎಲ್ಲ ಸದಸ್ಯರಿಗೆ ಮತ್ತು ಸತ್ಪಾತ್ರ ದಾನ ಮಾಡಿದ ಎಲ್ಲಾ ಭಕ್ತರಿಗೆ ಶುಭವನ್ನು ಹಾರೈಸಿದರು.

ಸಮಾರಂಭದಲ್ಲಿ ಹೂಲಿಕೆರೆ ದೊಡ್ಡಮಠದ ವಿರೂಪಾಕ್ಷಲಿಂಗ ಶಿವಾಚಾರ್ಯರು, ದೊಡ್ಡಗುಣಿ ಹಿರೇಮಠದ ರೇವಣಸಿದ್ದೇಶ್ವರ ಶಿವಾಚಾರ್ಯರು, ಕೆ.ಬಿದರೆ ದೊಡ್ಡಮಠದ ಪ್ರಭು ಕುಮಾರ ಶಿವಾಚಾರ್ಯರು ಪಾಲ್ಗೊಂಡು ಉಪದೇಶಾಮೃತ ನೀಡಿದರು.

ಸಮಾರಂಭಕ್ಕೂ ಮುನ್ನ ಮುಖ್ಯ ರಸ್ತೆಯಿಂದ ದೇವಸ್ಥಾನದವರೆಗೆ ಅಲಂಕೃತ ಸಾರೋಟ ಮೆರವಣಿಗೆ ಮೂಲಕ ಜಗದ್ಗುರುಗಳನ್ನು ಬರಮಾಡಿಕೊಂಡರು. ಉತ್ಸವದಲ್ಲಿ ಮಹಿಳೆಯರು ಆರತಿ ಹಿಡಿದ ಸುಮಂಗಲೆಯರು, ವೀರಗಾಸೆ ಅನೇಕ ವಾದ್ಯ ವೈಭವಗಳೊಂದಿಗೆ ಭವ್ಯ ಮೆರವಣಿಗೆ ಸಾಗಿತು. ಸಮಾರಂಭದ ನಂತರ ಬಂದ ಎಲ್ಲ ಭಕ್ತರಿಗೆ ಅನ್ನದಾಸೋಹ ಜರುಗಿತು.

ಮನುಷ್ಯ ಜೀವನದಲ್ಲಿ ಧರ್ಮ, ಅರ್ಥ, ಕಾಮ, ಮೋಕ್ಷ ಚತುರ್ವಿದ ಪುರುಷಾರ್ಥಗಳಲ್ಲಿ ಒಂದನ್ನಾದರೂ ಸಂಪಾದಿಸಿಕೊಳ್ಳದೆ ಹೋದರೆ ಮಾನವ ಜೀವನ ವ್ಯರ್ಥವಾಗಿ ಹೋಗುತ್ತದೆ. ಸುಖವನ್ನು ಬಯಸುವ ಮನುಷ್ಯ ಧರ್ಮ ಪರಿಪಾಲನೆ ಮಾಡಬೇಕಾಗುತ್ತದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಅಹಿಂಸಾದಿ ಧ್ಯಾನ ಪರ್ಯಂತರವಾದ ದಶಧರ್ಮ ಸೂತ್ರಗಳನ್ನು ಬೋಧಿಸಿ ಸಕಲರ ಬಾಳಿಗೂ ಬೆಳಕನ್ನು ತೋರಿದ್ದಾರೆ. ಇದೇ ದಾರಿಯಲ್ಲಿ 12ನೇ ಶತಮಾನದ ಶರಣರ ನಡೆದು ವೀರಶೈವ ಧರ್ಮ ಸಂಸ್ಕೃತಿಯನ್ನು ಬೆಳೆಸಿದರು ಎಂದು ರಂಭಾಪುರಿ ಜಗದ್ಗುರುಗಳು ತಿಳಿಸಿದರು.

# ನಿಧನ ವಾರ್ತೆ



## ಚನ್ನಬಸಪ್ಪ ಅಕ್ಕಿ

ಮುಳಗುಂದ: ಪಟ್ಟಣದ ಚಿಂದಿಪೇಟಿ ನಿವಾಸಿ ಚನ್ನಬಸಪ್ಪ ಅಕ್ಕಿ (73) ಬುಧವಾರ ನಿಧನರಾದರು. ಮೃತರು ಪತ್ನಿ ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

# 'ನಮ್ಮ ಮತ ನಮ್ಮ ಸರ್ಕಾರ' ಜಾಗೃತಿ ಕಿರುಚಿತ್ರ ಬಿಡುಗಡೆ

**■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ಎನ್. ಕೆ. ಎಂ. ಪಿ.ಎಸ್ ಸ್ಟುಡಿಯೋ ನಿರ್ಮಾಣದ 'ನಮ್ಮ ಮತ ನಮ್ಮ ಸರಕಾರ' ಕರ್ನಾಟಕದ ಮೊದಲ ಪ್ಯಾನ್ ಇಂಡಿಯಾ ಕಿರುಚಿತ್ರ ಏಳು ಭಾಷೆಗಳಲ್ಲಿ ಬಿಡುಗಡೆಗೊಂಡಿತು.

ಪೋಸ್ಟರ್ ಬಿಡುಗಡೆಯ ಜೊತೆಗೆ ಕನ್ನಡ, ಇಂಗ್ಲೀಷ್, ಹಿಂದಿ, ಮರಾಠಿ, ತೆಲಗು, ತಮಿಳು, ಮಲಯಾಳಂ ಹೀಗೆ ಏಳು ಭಾಷೆಗಳಲ್ಲಿ ಕಿರುಚಿತ್ರವನ್ನು ಎನ್ಕೆಎಂಪಿಎಸ್ ಯೂಟ್ಯೂಬ್ ಚಾನೆಲ್‌ನಲ್ಲಿ ಬಿಡುಗಡೆ ಮಾಡಿದ ಹಿರಿಯರಂಗ ಮತ್ತು ಚಿತ್ರರಂಗ ಕಲಾವಿದ ಟಿ.ಜೆ. ಭಾಂಡಗೆ ಮಾತನಾಡಿ, ಮತದಾನ ಮಾಡುವದು ಪ್ರತಿಯೊಬ್ಬ ಭಾರತೀಯರ ಹಕ್ಕು ಮತ್ತು ಕರ್ತವ್ಯ. ದೇಶದ ಉಜ್ವಲ



ಭವಿಷ್ಯಕ್ಕಾಗಿ ಮತದಾನ ಅಗತ್ಯವಿದ್ದು ವಿವಿಧ ಪಕ್ಷಗಳು, ವ್ಯಕ್ತಿಗಳು ನೀಡುವ ಟೊಳ್ಳು ಭರವಸೆಗಳು, ಆಮಿಷಗಳಿಗೆ ಒಳಗಾಗದೆ ಪ್ರಾಮಾಣಿಕವಾಗಿ ತಪ್ಪದೇ ನಮ್ಮ ನಮ್ಮ ಮತವನ್ನು ಚಲಾಯಿಸಬೇಕು ಎಂದರು.

ಕಿರುಚಿತ್ರ ಬಿಡುಗಡೆ ಸಂದರ್ಭದಲ್ಲಿ ಪ್ರೊಡಕ್ಷನ್ ಮ್ಯಾನೇಜರ್ ವಿಕ್ರಂ ಕುಮಠ, ಸಹಾಯಕ ನಿರ್ದೇಶಕಿ ಭಾವನಾ ಶಿಂಧೆ, ಹಿರಿಯ ರಂಗಕಲಾವಿದೆ ರೇಖಾ ಹೊನವಾಡ ಮತ್ತು ನಿರ್ದೇಶಕ ಎಸ್.ಎಸ್. ಕುಲಕರ್ಣಿ(ಬಾಬಾ) ಉಪಸ್ಥಿತರಿದ್ದರು.

ತಾರಾಗಣದಲ್ಲಿ ರೂಪಶ್ರೀ ಪಾಟೀಲ, ಮಯೂರಿ ಛತ್ರೆ, ಅಭಿಷೇಕ್ ಕುಲಕರ್ಣಿ, ಸಂದೀಪ್ ಪದಕಿ, ಗೀತಾ ತಬೀಬ್, ತಾಂತ್ರಿಕ ವರ್ಗದಲ್ಲಿ ಪಿಆರ್‌ಓ ಡಾ.ಪ್ರಭು ಗಂಜಿಹಾಳ, ಡಾ.ವೀರೇಶ ಹಂಡಿಗಿ, ಸಹಾಯಕ ನಿರ್ದೇಶನ ಭಾವನಾ ಶಿಂಧೆ, ಚಿತ್ರಕಥೆ - ಸಂಭಾಷಣೆ, ವಿಎಫ್‌ಎಕ್ಸ್-3ಡಿ ಅನಿಮೇಷನ್, ಸಂಕಲನ ನಿರ್ದೇಶನ ಜೊತೆ-ಗೆ ನಿರ್ಮಾಣ ಎಸ್.ಎಸ್. ಕುಲಕರ್ಣಿ(ಬಾಬಾ)ಅವರದ್ದಿದೆ. ನಿರ್ಮಾಣ ವ್ಯವಸ್ಥೆಯನ್ನು ವಿಕ್ರಂ ಕುಮಠ ವಹಿಸಿದ್ದಾರೆ.

# ಕೇಂದ್ರದ ಅಚ್ಛೇ ದಿನ್ ಬರಲೇ ಇಲ್ಲ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಯುವಕರಿಗೆ ಉದ್ಯೋಗ ಸೃಷ್ಟಿಸುವಲ್ಲಿ ಕೇಂದ್ರ ಸರಕಾರ ವಿಫಲವಾಗಿದ್ದು, ಯುವಕರಿಗೆ ಸೇರಿದಂತೆ ದೇಶದ ಜನತೆ ಕಾಯ್ದು ಕುಳಿತಿರುವ ಅಚ್ಛೇದಿನ್ ಬರಲೇ ಇಲ್ಲ ಎಂದು ರಾಜೀವ ಗಾಂಧಿ ಪಂಚಾಯತ ರಾಜ್ ಸಂಘಟನೆಯ ತಾಲೂಕಾಧ್ಯಕ್ಷ ಫಕ್ಕೀರೇಶ ಮ್ಯಾಟಣ್ಣನವರ ಹೇಳಿದರು.

ಅವರು ತಾಲೂಕಿನ ಬಾಲೇಹೊಸೂರ ಗ್ರಾಮದಲ್ಲಿ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ ಅಭ್ಯರ್ಥಿ ಆನಂದಸ್ವಾಮಿ ಗಡ್ಡದ್ದೇವರಮಠ ಅವರ ಪರ ಮನೆ ಮನೆಗೆ ತೆರಳಿ ಮತಯಾಚನೆ ಸಂದರ್ಭದಲ್ಲಿ ಮಾತನಾಡಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಬಂದಮೇಲೆ ಗ್ಯಾರಂಟಿ ಯೋಜನೆಗಳನ್ನು ತಕ್ಷಣ ಜಾರಿಗೊಳಿಸಿ, ಬಡವರು, ಮಹಿಳೆಯರು, ಯುವಕರಿಗೆ ಅನುಕೂಲ ಮಾಡಿಕೊಟ್ಟಿದ್ದು, ಬಿಟ್ಟಿ ಭಾಗ್ಯ ಎನ್ನುವವರಿಗೆ ತಕ್ಕ ಪಾಠ ಕಲಿಸಬೇಕು. ಈ ಬಾರಿ ಕಾಂಗ್ರೆಸ್ ಅಭ್ಯರ್ಥಿಯನ್ನು ಹೆಚ್ಚಿನ ಮತಗಳಿಂದ ಆರಿಸಿ ತರಬೇಕು ಎಂದು ವಿನಂತಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಯಲ್ಲಪ್ಪ ಸೂರಣಗಿ, ಬಸವರಡ್ಡಿ ಹನಮರಡ್ಡಿ, ಮಾರುತಿ ಕೊಳಲ, ಮಾರ್ತಾಂಡಪ್ಪ ಪೆದ್ದರ, ಸಿದ್ಧಲಿಂಗಯ್ಯ ಪಶುಪತಿಮಠ, ಜುಂಜಪ್ಪ ಮುದಿಯಮ್ಮನವರ, ಮಂಜಯ್ಯ ಶೀತಮ್ಮನವರ, ಬಸಣ್ಣ ಗೂಳಣ್ಣವರ, ಫಕ್ಕೀರಯ್ಯ ಹಿರೇಮಠ, ಕರಿಯಪ್ಪ ಸಾಂದ್ಲಿ, ಪರಸಣ್ಣ ಒಂಟಿ, ಹಜರೇಸಾಬ ಮಾಚೇನಹಳ್ಳಿ, ಹನಮಂತಪ್ಪ ಸವಣೂರ, ಗುಡದಯ್ಯ ದೇವರಮನಿ, ಬಸಣ್ಣ ಅರಳಿ, ದೇವಪ್ಪ ಭಜಂತ್ರಿ, ಜಯಕ್ಕ ಕಳ್ಳಿ, ನರೇಂದ್ರಪ್ಪ ಜಾಲವಾಡಗಿ ಸೇರಿದದಂತೆ ಮುಖಂಡರು, ನೂರಾರು ಕಾರ್ಯಕರ್ತರು ಹಾಜರಿದ್ದರು.

# ನರೇಗಾ ಯೋಜನೆ ಕೂಲಿ ಕಾರ್ಮಿಕರಿಗೆ ಆಶಾಕಿರಣ

**■ವಿಜಯಸಾಕ್ಷಿ ಸುದ್ದಿ, ರೋಣ**

ನರೇಗಾ ಯೋಜನೆಯು ನಮ್ಮ ಭಾಗದ ದುಡಿಯುವ ಜನರಿಗೆ ಆಶಾಕಿರಣವಾಗಿದೆ. ಸತತ ಬರಗಾಲ ಬೀಳುವ ಸಮಯದಲ್ಲಿ ದುಡಿಯಲು ಕೆಲಸ ಇಲ್ಲದ ವೇಳೆ ನರೇಗಾ ಯೋಜನೆಯಡಿಯಲ್ಲಿ ಸಾಮೂಹಿಕ ಕಾಮಗಾರಿಯ ಕೆಲಸ ನೀಡುವ ಮೂಲಕ ಕೂಲಿಕಾರರಿಗೆ ಇದ್ದೂರಲ್ಲೇ ಕೆಲಸಗಳು ಸಿಗುತ್ತವೆ ಎಂದು ಹೊಳೆ ಮಣ್ಣೂರ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಶಿವನಗೌಡ ಮೆಣಸಗಿ ಅಭಿಪ್ರಾಯಪಟ್ಟರು.

ತಾಲೂಕಿನ ಹೊಳೆ ಮಣ್ಣೂರ ಗ್ರಾಮದಲ್ಲಿ ಮೇ-1, ವಿಶ್ವ ಕಾರ್ಮಿಕ



ದಿನಾಚರಣೆ ಅಂಗವಾಗಿ ನರೇಗಾ ಕೂಲಿಕಾರರಿಗೆ ಸಿಹಿ ವಿತರಣೆ ಮಾಡಿ ಹೂಗುಚ್ಛ ನೀಡುವ ಮೂಲಕ ಕಾರ್ಮಿಕ ದಿನಾಚರಣೆಯನ್ನು ಆಚರಿಸಿ ಅವರು ಮಾತನಾಡಿದರು.

ಬರಗಾಲದಲ್ಲಿ ಕೆಲಸ ಕೊಡುವ ಏಕೈಕ ಯೋಜನೆ ನರೇಗಾ. ಈ ಯೋಜನೆಯ ಮೂಲಕ ಬಡ ಜನರನ್ನು ಆರ್ಥಿಕ ಸಂಕಷ್ಟದಿಂದ ಪಾರು ಮಾಡವ ಸಲುವಾಗಿ 2005ರಲ್ಲಿ ಜಾರಿಗೆ ತರಲಾಯಿತು. ಕೂಲಿಕಾರರಿಗೆ ಕುಡಿಯುವ ನೀರಿನ ವ್ಯವಸ್ಥೆ, ದಣಿವಾರಿಸಿಕೊಳ್ಳಲು ನೆರಳಿನ ವ್ಯವಸ್ಥೆ ಮಾಡುವುದು ನರೇಗಾ ಯೋಜನೆಯಲ್ಲಿದೆ.

ಕಾರ್ಮಿಕ ಆಂದೋಲನದ ಸಾಮಾಜಿಕ ಮತ್ತು ಆರ್ಥಿಕ ಸಾಧನೆಗಳನ್ನು ಆಚರಿಸುವ ದಿನ ಇದಾಗಿದ್ದು, ಸಾಕಷ್ಟು ಕಾರ್ಮಿಕ ಹೋರಾಟಗಾರರ ಶ್ರಮದ ಫಲದಿಂದ ಇಂದಿನ ದಿನಗಳಲ್ಲಿ ಸರ್ಕಾರದ ಯೋಜನೆಗಳಲ್ಲಿ ಕಾರ್ಮಿಕರಿಗೆ ಅಧಿಕ ಸೌಲಭ್ಯಗಳು ಸಿಗುವಂತಾಗಿವೆ ಎಂದರು.

ಕಾರ್ಯಕ್ರಮದಲ್ಲಿ ಹೊಳೆಮಣ್ಣೂರ ಗ್ರಾಮ ಪಂಚಾಯಿತಿ ಸಿಬ್ಬಂದಿ ವರ್ಗ, ನರೇಗಾ ಸಿಬ್ಬಂದಿ ವರ್ಗ ಮತ್ತು ಕೂಲಿಕಾರರು ಭಾಗವಹಿಸಿದ್ದರು.

### ಕಾರ್ಮಿಕ ದಿನಾಚರಣೆ ನಿಮಿತ್ತ ರಕ್ತದಾನ ಶಿಬಿರ, ಪ್ರತಿಭಾ ಪುರಸ್ಕಾರ

# ಕಾಯಕದಿಂದ ಕಾರ್ಮಿಕರ ಬದುಕು ಸುಂದರಗೊಳ್ಳಲಿ

**■ವಿಜಯಸಾಕ್ಷಿ ಸುದ್ದಿ, ಗದಗ**

ದೇಶ ಕಟ್ಟುವ ಕಾರ್ಯದಲ್ಲಿ ತಮ್ಮನ್ನು ಸಮರ್ಪಿಸಿಕೊಂಡಿರುವ ಕಾರ್ಮಿಕ ಬಾಂಧವರು ಕಾಯಕಕ್ಕೆ ಹೆಚ್ಚಿನ ಒತ್ತು ಕೊಟ್ಟವರು. ಕಾಯಕದಿಂದ ಕಾರ್ಮಿಕರ ಬದುಕು ಸುಂದರವಾಗಿ ರೂಪುಗೊಳ್ಳಲಿ ಎಂದು ಹರ್ಲಾಪೂರದ ಹಠಯೋಗಿ ಕೊಟ್ಟುರೇಶ್ವರ ಮಠದ ಪೂಜ್ಯ ಡಾ.ಅಭಿನವ ಕೊಟ್ಟೂರ ಮಹಾಸ್ವಾಮಿಗಳು ಅಭಿಪ್ರಾಯಪಟ್ಟರು.

ಬುಧವಾರ ಗದುಗಿನ ಡಿ.ಸಿ. ಮಿಲ್ ಕಂಪೌಂಡ್ ಆವರಣದಲ್ಲಿರುವ ಕಟ್ಟಡ ನಿರ್ಮಾಣ ಕಾರ್ಮಿಕರ ಮಹಾ ಸಂಘ ಏರ್ಪಡಿಸಿದ್ದ ಕಾರ್ಮಿಕರ ದಿನಾಚರಣೆ ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಸಮಾರಂಭದ ಸಾನಿಧ್ಯ ವಹಿಸಿ ಶ್ರೀಗಳು ಮಾತನಾಡಿದರು.

ದುಡಿಮೆಯನ್ನೇ ನಂಬಿ ಬದುಕುತ್ತಿರುವ ಕಾರ್ಮಿಕರು ಪರಿಶ್ರಮಿಗಳಾಗಿದ್ದು, ದುಡಿಮೆಯೊಂದೇ ಅವರಿಗಿರುವ ಗುರಿಯಾಗಿದೆ. ಇದರೊಂದಿಗೆ ಕಾರ್ಮಿಕರು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಬೇಕು. ಒಳ್ಳೆಯ ಸಂಸ್ಕಾರ, ಸಂಸ್ಕೃತಿಯನ್ನು ರೂಢೀಸಬೇಕೆಂದರು.

ಗದಗ ಉಪವಿಭಾಗದ ಕಾರ್ಮಿಕ ಅಧಿಕಾರಿ ಭೀಮರಾವ್ ಜಾಧವ ಮಾತನಾಡಿ, ಸರಕಾರವು ಕಾರ್ಮಿಕರ ಏಳ್ಗೆಗಾಗಿ ಹತ್ತು ಹಲವು ಯೋಜನೆಗಳನ್ನು ರೂಪಿಸಿದ್ದು, ಅವುಗಳನ್ನು ಸದುಪಯೋಗ ಮಾಡಿಕೊಂಡು ತಮ್ಮ ಜೀವನವನ್ನು ಇನ್ನಷ್ಟು



ಉತ್ತಮಪಡಿಸಿಕೊಳ್ಳಬೇಕು ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಗದಗ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಮಹಾಂತೇಶ ಹಿರೇಮನಿಪಾಟೀಲ, ಕಾರ್ಯದರ್ಶಿ ಬಿ.ಎಚ್. ಮಾಡಲಗೇರಿ, ವಕೀಲರಾದ ಗುರುರಾಜ ಗೌರಿ, ಗದಗ ಕನ್ಸಲ್ಟಿಂಗ್ ಸಿವ್ಹಿಲ್ ಇಂಜಿನಿಯರ್ ಅಸೋಶಿಯೇಶನ್‌ನ ಅಧ್ಯಕ್ಷ ಎಂ.ಪಿ. ಪಾಟೀಲ, ಸರ್ ಎಂ.ವಿಶ್ವೇಶ್ವರಯ್ಯ ಸಿವ್ಹಿಲ್ ಕನ್ಸಲ್ಟಂಟ್ ಆ್ಯಂಡ್ ಇಂಜಿನಿಯರ್ಸ್ ಫೋರಂ ಅಧ್ಯಕ್ಷ ಬೂದೇಶ ಬ್ಯಾಹಟ್ಟಿ ಮಾತನಾಡಿದರು.

ಕಾರ್ಮಿಕ ದಿನಾಚರಣೆಯ ಅಂಗವಾಗಿ ಕಾರ್ಮಿಕರಿಂದ ಗದಗ ಐಎಂಎ ರಕ್ತಭಂಡಾರದಲ್ಲಿ ಏರ್ಪಡಿಸಿದ್ದ ರಕ್ತದಾನ ಶಿಬಿರದಲ್ಲಿ ಕಾರ್ಮಿಕರು ರಕ್ತದಾನ ಮಾಡಿದರು. ದಾನಿಗಳಿಗೆ ಸಮಾರಂಭದಲ್ಲಿ ಪ್ರಮಾಣಪತ್ರ ನೀಡಿ ಗೌರವಿಸಲಾಯಿತು. ಕಾರ್ಮಿಕರ ಪ್ರತಿಭಾನ್ವಿತ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ಸಮಾರಂಭದಲ್ಲಿ ಕಾರ್ಮಿಕ ಇಲಾಖೆಯ ಗಿರೀಶ್ ಬಂಕದಮನಿ, ಸಂದೇಶ ಪಾಟೀಲ, ಕಾನೂನು ಇಲಾಖೆಯ ಬಸವರಾಜ ಕುಕನೂರ, ಕಟ್ಟಡ ನಿರ್ಮಾಣ ಕಾರ್ಮಿಕರ ಮಹಾ ಸಂಘದ ಉಪಾಧ್ಯಕ್ಷ ಜಂದಿಸಾಬ ಢಾಲಾಯತ್, ಕಾರ್ಯದರ್ಶಿ ಶಿವಶಂಕರಗೌಡ ಕರಿಸೋಮನಗೌಡ್ರ ವೇದಿಕೆಯ ಮೇಲೆ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ವಿವಿದ ಕಾರ್ಮಿಕ ಸಂಘಟನೆಗಳ ಪದಾಧಿಕಾರಿಗಳಾದ ಚನ್ನವೀರಗೌಡ ಪಾಟೀಲ, ಚಾಂದಸಾಬ ಅಬ್ಬಿಗೇರಿ, ಕಲ್ಲೇಶಪ್ಪ ಕುಡಗುಂಟಿ, ಜಾಕೀರ್‌ಹುಸೇನ ಕಲಬುರ್ಗಿ, ಅಲ್ತಾಫ ಕೊಪ್ಪಳ, ಅಡಿವೆಪ್ಪ ಚಲವಾದಿ, ಚಾಂದಸಾಬ ಸೊಲ್ಲಾಪೂರ, ನೂರಅಹ್ಮದ್ ಬಳ್ಳಾರಿ, ಮಹ್ಮದ್‌ಇಬ್ರಾಹಿಮ್ ಹಳ್ಳಿಕೇರಿ, ಝಾಕೀರ್‌ಹುಸೇನ ಕರಡಿ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

ನಮೃತಾ ಹಾಗೂ ಆಕಾಂಕ್ಷಾ ಪ್ರಾರ್ಥಿಸಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಕಟ್ಟಡ ನಿರ್ಮಾಣ ಕಾರ್ಮಿಕರ ಮಹಾ ಸಂಘದ ಅಧ್ಯಕ್ಷ ಮಾಬುಖಾನ್ ಜಿ.ಪಠಾಣ, ಸರ್ವ ಕಾರ್ಮಿಕರ ಸಂಘಟನೆಗಳು ಒಗ್ಗೂಡಿಕೊಂಡು ಈ ಕಾರ್ಯಕ್ರಮ ಏರ್ಪಡಿಸಿದ್ದು ಸಂಘಟನೆಗೆ ಬಲ ನೀಡಿದಂತಾಗಿದೆ. ಜೊತೆಗೆ ಸಂಘವು ಸ್ವಂತ ಕಟ್ಟಡ ನಿರ್ಮಿಸಿಕೊಳ್ಳುವಲ್ಲಿ ಎಲ್ಲ ಕಾರ್ಮಿಕರೂ ನನ್ನೊಂದಿಗೆ ಕೈಜೋಡಿಸಿ, ಬರಲಿರುವ ದಿನಗಳಲ್ಲಿ ಸಂಘಟನೆಯನ್ನು ಇನ್ನಷ್ಟು ಬಲವರ್ಧನೆ ಮಾಡುವ ಮೂಲಕ ಸಂಘದ ಕಟ್ಟಡವನ್ನು ಪೂರ್ಣ ಪ್ರಮಾಣದಲ್ಲಿ ಸುಂದರಗೊಳಿಸಲಾಗುವದು ಎಂದರು.

ನಿಂಗಪ್ಪ ಕಟ್ಟಿಮನಿ ಸ್ವಾಗತಿಸಿದರು. ಕೆ.ಬಿ. ಕುಡಗುಂಟಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಶರೀಫ ಯಾದಗಿರಿ ಹಾಗೂ ನಾಸೀರ್ ಚಿಕ್ಕೇನಕೊಪ್ಪ ನಿರೂಪಿಸಿದರು. ಕೊನೆಗೆ ಬಸವರಾಜ ಅರಮನಿ ವಂದಿಸಿದರು.

ಕಾರ್ಯಕ್ರಮಕ್ಕೂ ಮುನ್ನ ಡಾ.ಪಂ.ಪುಟ್ಟರಾಜ ಗವಾಯಿಗಳವರ, ಮಹಾತ್ಮ ಗಾಂಧಿ, ಡಾ. ಬಿ.ಆರ್. ಅಂಬೇಡ್ಕರ್, ಸಂಗೊಳ್ಳಿ ರಾಯಣ್ಣ ಮೂರ್ತಿಗೆ ಮಾಲಾರ್ಪಣೆ ಮಾಡುವ ಮೂಲಕ ಪಾದಯಾತ್ರೆ ನಡೆಸಿ ಸಂಘದ ಕಾರ್ಯಾಲಯ ತಲುಪಿ ಸಭೆ ನಡೆಸಲಾಯಿತು.

## ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಅನ್ಯಾಯ



■ ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರದ ನರೇಂದ್ರ ಮೋದಿ ಸರ್ಕಾರ ಕರುನಾಡಿಗೆ ಕೊಟ್ಟಿದ್ದು ಚೊಂಬು. ಜಿಎಸ್‌ಟಿ ಹಣದಲ್ಲೂ ಮಲತಾಯಿ ಧೋರಣೆ ಅನುಸರಿಸುವ ಕೇಂದ್ರ ಸರ್ಕಾರ ಬರ ಪರಿಹಾರ ವಿಷಯದಲ್ಲೂ ರಾಜ್ಯಕ್ಕೆ ಅನ್ಯಾಯ ಮಾಡಿದೆ ಎಂದು ರಾಜ್ಯ ಕಂದಾಯ ಸಚಿವ ಕೃಷ್ಣ ಭೈರೇಗೌಡ ಆರೋಪಿಸಿದರು.

ಹಾವೇರಿ–ಗದಗ ಲೋಕಸಭಾ ಚುನಾವಣೆಯ ಅಂಗವಾಗಿ ಗದಗ ನಗರದ ವಾರ್ಡ್ ನಂ.33ರಲ್ಲಿ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಪರವಾಗಿ ರಾಜ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಇಲಾಖೆ ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ ನೇತೃತ್ವದಲ್ಲಿ ನಡೆದ ಪ್ರಚಾರ ಸಭೆಯಲ್ಲಿ ಮತಯಾಚನೆ ಮಾಡಿ ಅವರು ಮಾತನಾಡಿದರು.

ಅನೇಕ ಬಡವರ ಪರ ಹಾಗೂ ಕಾರ್ಮಿಕರ ಪರವಾದ ಯೋಜನೆಗಳನ್ನು ನೀಡಿರುವ ಕಾಂಗ್ರೆಸ್ ಸರ್ಕಾರವು ಈ ಬಾರಿ ಕ್ರಾಂತಿಕಾರಕ ಪಂಚ ನ್ಯಾಯ ಗ್ಯಾರಂಟಿ ಯೋಜನೆಗಳನ್ನು ಘೋಷಿಸಿದ್ದು, ಜನರ ನಿರೀಕ್ಷೆಯಂತೆ ಸರ್ಕಾರ ಅಧಿಕಾರಕ್ಕೆ ಬಂದ ಕೂಡಲೇ ಎಲ್ಲವನ್ನೂ ಅನುಷ್ಠಾನಗೊಳಿಸಲಾಗುವುದು ಎಂದು ಹೇಳಿದರು.ಸಚಿವ ಎಚ್.ಕೆ. ಪಾಟೀಲ ಮಾತನಾಡಿ, ರೈತರ ಸಾಲಮನ್ನಾ ಮಾಡದ ಬಿಜೆಪಿ ಉದ್ದಿಮೆದಾರರ ಕೋಟಿಗಳಷ್ಟು ಸಾಲವನ್ನು ಪ್ರತಿವರ್ಷ ಮನ್ನಾ ಮಾಡುತ್ತ ಬರುತ್ತಿದೆ. ಬಿಜೆಪಿಯ ರೈತರ, ಬಡವರ ಬಗ್ಗೆ ಇರುವ ಡೋಂಗಿ ನೀತಿಗೆ ಇತಿಶ್ರೀ ಹೇಳವ ಸಮಯ ಬಂದಿದೆ. ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಅವರಿಗೆ ನಿಮ್ಮ ಸೇವೆ ಮಾಡಲು ಒಂದು ಅವಕಾಶ ನೀಡಿ, ಹೆಚ್ಚಿನ ಮತಗಳ ಅಂತರದಿಂದ ಗೆಲ್ಲಿಸಬೇಕು ಎಂದು ಮನವಿ ಮಾಡಿದರು.ಈ ಸಂದರ್ಭದಲ್ಲಿ ಮಾಜಿ ಶಾಸಕ ಡಿ.ಆರ್. ಪಾಟೀಲ, ರಾಮಣ್ಣ, ವಾರ್ಡ್ ಸದಸ್ಯರಾದ ಚಿಮ್ಮಿ ನದಾಫ, ಗದಗ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬರ್ಚಿ, ಬುಡ್ಡಣ್ಣ ಹಬೀಬ್ ಸೇರಿದಂತೆ ಮುಖಂಡರು, ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.

### ಪತ್ರಿಕಾಗೋಷ್ಠಿಯಲ್ಲಿ ರಾಜ್ಯ ಸರ್ಕಾರದ ವಿರುದ್ಧ ವ್ಹಿ.ಆರ್. ಗೋವಿಂದಗೌಡ್ರ ಆರೋಪ

## ಸೋಲಿನ ಭೀತಿಯಲ್ಲಿರುವ ಕಾಂಗ್ರೆಸ್‌ನಿಂದ ಕುತಂತ್ರ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಮನಗರದ ಕಾಂಗ್ರೆಸ್ ಶಾಸಕರ ಅಶ್ಲೀಲ ವಿಡಿಯೊ ಈಗಾಗಲೇ ರಾಜ್ಯಾದ್ಯಂತ ಓಡಾಡುತ್ತಿದ್ದು, ಇದರ ವಿರುದ್ಧ ಯಾರೂ ಮಾತನಾಡುತ್ತಿಲ್ಲ. ಅವಳಿ ನಗರದಲ್ಲಿ ನೀರಿನ ಸಮಸ್ಯೆ ತಾಂಡವಾಡುತ್ತಿದ್ದು, ಇದೆಲ್ಲವನ್ನು ಖಂಡಿಸಿ ಖಾಲಿ ಕೊಡ ಹಿಡಿದು ಮೇ.4ರಂದು ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ಆಗಮಿಸಿದ ಸಂದರ್ಭದಲ್ಲಿ ಜಿಲ್ಲಾ ಜೆಡಿಎಸ್‌ನಿಂದ ಮುತ್ತಿಗೆ ಹಾಕಲಾಗುವುದು ಎಂದು ಜೆಡಿಎಸ್ ರಾಜ್ಯ ವಕ್ತಾರ ವ್ಹಿ.ಆರ್. ಗೋವಿಂದಗೌಡ್ರ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಿಂದೆ ಕಾಂಗ್ರೆಸ್ ಶಾಸಕ ಹೆಚ್.ವೈ. ಮೇಟಿಯವರ ರಾಸಲೀಲೆ ಪ್ರಕರಣದಲ್ಲಿ, ಆಗ ಸಿಎಂ ಆಗಿದ್ದ ಸಿದ್ದರಾಮಯ್ಯನವರು ಮಾತನಾಡಲಿಲ್ಲ. ಪ್ರಜ್ವಲ್ ರೇವಣ್ಣನವರನ್ನು ಈಗಾಗಲೇ ಪಕ್ಷದಿಂದ ಉಚ್ಚಾಟನೆ ಮಾಡಲಾಗಿದೆ. 2ರಿಂದ 3ಸಾವಿರ ಮಹಿಳೆಯರ ಅಶ್ಲೀಲ




ವಿಡಿಯೊಗಳನ್ನು ಕಾಂಗ್ರೆಸ್‌ನವರೇ ಹಂಚಿದ್ದಾರೆ. ಆ ಮಹಿಳೆಯರಿಗೆ ಕಾಂಗ್ರೆಸ್ ಪಕ್ಷ ಅವಮಾನ ಮಾಡಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕುಮಾರಸ್ವಾಮಿ ಸಿಎಂ ಆಗಿದ್ದಾಗ ಮದ್ಯ ಹಾಗೂ ಲಾಟರಿ ಬಂದ್ ಮಾಡಿಸಿ ಮಹಿಳೆಯರ ಹಿತ ಕಾಪಾಡಿದ್ದರು. ತದ್ವಿರುದ್ಧವಾಗಿ ಈಗಿನ ಕಾಂಗ್ರೆಸ್ ಸರ್ಕಾರ ಸಾರಾಯಿ ಕುಡಿಸಿ ಜನರನ್ನು ಹಾಳು ಮಾಡುತ್ತಿದೆ. ಕಾಂಗ್ರೆಸ್ ಪ್ರಣಾಳಿಕೆ ಬಗ್ಗೆ ಮಿತ್ರ ಪಕ್ಷದವರೇ ಒಪ್ಪಿಗೆ ಸೂಚಿಸಿಲ್ಲ. ಕೇಂದ್ರದಲ್ಲಿ ಯಾವುದೇ ಪಕ್ಷ ಅಧಿಕಾರಕ್ಕೆ ಬರಲು 272ಸ್ಥಾನ ಬೇಕು. ಆದರೆ, ದೇಶಾದ್ಯಂತ ಕೇವಲ 230 ಕ್ಷೇತ್ರಗಳಲ್ಲಿ ಮಾತ್ರ ಕಾಂಗ್ರೆಸ್ ಸ್ಪರ್ಧಿಸಿದೆ. ಅದರಲ್ಲಿ ಈಗಾಗಲೇ ಎರಡು ಸ್ಥಾನ ಕಳೆದುಕೊಂಡಿದೆ. ಇಂತಹ ಪರಿಸ್ಥಿತಿಯಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರಲು ಸಾಧ್ಯವೇ ಎಂದು ಪ್ರಶ್ನಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಲ್ಲಿಕಾರ್ಜುನ ಪರ್ವತಗೌಡ್ರ, ಪ್ರಫುಲ್ ಪುಣೇಕರ್, ಜೋಸೆಫ್ ಉದೋಜಿ, ಜಿ.ಕೆ. ಕೊಳ್ಳಿಮಠ ಸೇರಿದಂತೆ ಜೆಡಿಎಸ್ ಮುಖಂಡರು ಉಪಸ್ಥಿತರಿದ್ದರು.

> ಪಕ್ಷದ ವಯಕ್ತಿಕ ಸಭೆ ನಡೆದಾಗ ಗಲಾಟೆ ಮಾಡಿದ್ದು ತಪ್ಪು. ನೇಹಾ ಹಿರೇಮಠ, ಸೌಜನ್ಯ ಸೇರಿದಂತೆ ಹಲವು ಮಹಿಳೆಯರ ದೌರ್ಜನ್ಯದ ಬಗ್ಗೆ ಕಾಂಗ್ರೆಸ್ ಪಕ್ಷದ ಮಹಿಳಾ ಮುಖಂಡರು ಮಾತನಾಡುತ್ತಿಲ್ಲ. ಪ್ರಜ್ವಲ್ ಪ್ರಕರಣದಲ್ಲಿ ರಾಜಕೀಯ ಲಾಭ ಪಡೆಯಲು ಕಾಂಗ್ರೆಸ್ ಮುಂದಾಗಿದೆ. ಬೇರೆ ಮಹಿಳೆಯರಿಗೆ ಅನ್ಯಾಯವಾದಾಗ ಬಾಯಿ ಬಿಡುವುದಿಲ್ಲ. ಒಬ್ಬ ಮಹಿಳೆ ಸಿಎಂ ಬಳಿ ನ್ಯಾಯ ಕೇಳಲು ಹೋದಾಗ ಕೆಟ್ಟದಾಗಿ ನಡೆದುಕೊಳ್ಳುತ್ತಾರೆ. ಈ ಬಗ್ಗೆ ಕಾಂಗ್ರೆಸ್ ಮಹಿಳೆಯರು ಮಾತನಾಡುವುದಿಲ್ಲ. ಪ್ರಜ್ವಲ್ ಪ್ರಕರಣದ ಮಹಿಳೆಯರ ವಿಡಿಯೊ ಲೀಕ್ ಮಾಡಿ ಅವರ ಮಾನ ಹರಾಜು ಹಾಕಿದ್ದು ಇದೇ ಕಾಂಗ್ರೆಸ್. ಚುನಾವಣೆಯಲ್ಲಿ ಸೋಲುವ ಭೀತಿಯಿಂದ ಕಾಂಗ್ರೆಸ್ ಈ ರೀತಿ ಕುತಂತ್ರ ಮಾಡುತ್ತಿದೆ.
>
> – ವ್ಹಿ.ಆರ್. ಗೋವಿಂದಗೌಡ್ರ. ಜೆಡಿಎಸ್ ರಾಜ್ಯ ವಕ್ತಾರ.

## ಆನಂದಸ್ವಾಮಿ ಗಡ್ಡದೇವರಮಠ ಪರ ಸಚಿವ ಎಚ್.ಕೆ. ಪಾಟೀಲ ಪ್ರಚಾರ

■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರಸ್ತುತ ನಡೆಯುತ್ತಿರುವ ಲೋಕಸಭಾ ಚುನಾವಣೆಯು ಜನರ ಬದುಕು–ಭಾವನೆಗಳ ನಡುವಿನ ಚುನಾವಣೆಯಾಗಿದೆ ಎಂದು ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ 35ನೇ ವಾರ್ಡಿನ ಶ್ರೀರಾಮ ನಗರದಲ್ಲಿ ಹಾವೇರಿ–ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ



ಆನಂದಸ್ವಾಮಿ ಗಡ್ಡದೇವರಮಠ ಅವರ ಪ್ರಚಾರಾರ್ಥವಾಗಿ ನಡೆದ ಸಭೆಯಲ್ಲಿ ಅವರು ಮಾತನಾಡಿದರು.

ಪ್ರತಿ ಚುನಾವಣೆಗಳಲ್ಲೂ ಮಹಿಳೆಯರು ದೂರ ಉಳಿಯುತ್ತಿದ್ದರು. ಪ್ರಸ್ತುತ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್‌ನ ಪಂಚ ಗ್ಯಾರಂಟಿಗಳನ್ನು ಬೆಂಬಲಿಸಿ ಇಷ್ಟೊಂದು ಪ್ರಮಾಣದಲ್ಲಿ ಮಹಿಳೆಯರು ಸೇರಿರುವುದು ನಮ್ಮ ಆತ್ಮವಿಶ್ವಾಸ ಹೆಚ್ಚಿಸುವಂತೆ ಮಾಡಿದೆ ಎಂದರು.

ಗ್ಯಾರಂಟಿ ಯೋಜನೆ ಜಾರಿ ಮಾಡಿದರೆ ರಾಜ್ಯ ದಿವಾಳಿಯಾಗುತ್ತದೆ ಎಂದು ಪ್ರಧಾನಿ ಮೋದಿ ಅವರು ಹೇಳಿದರು. ಆದರೆ, 20 ಲಕ್ಷ ಕೋಟಿ ಶ್ರೀಮಂತರ ಸಾಲವನ್ನು ಮನ್ನಾ ಮಾಡಿದರು. ಆವಾಗ ದಿವಾಳಿಯಾಗದ ದೇಶ, ಬಡವರಿಗೆ 58 ಸಾವಿರ ಕೋಟಿ ಹಣ ನೀಡಿದರೆ ಹೇಗೆ ದಿವಾಳಿಯಾಗುತ್ತದೆ ಎಂದು ಕೇಂದ್ರ ಸರಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ನಗರಸಭೆ ನಾಮನಿರ್ದೇಶಿತ ಸದಸ್ಯ ದುರಗೇಶ ವಿಭೂತಿ, ಮುಖಂಡರಾದ ಡಾ. ಮ್ಯಾಗೇರಿ, ಅನಿಲ ಗರಗ, ಗೂರಪ್ಪ ಕಲ್ಯಾಣದವರ, ಹುಸೇನಪ್ಪ ಗಡ್ಡದವರ, ಕಂಠೆಪ್ಪ ವಿಭೂತಿ, ಯಲ್ಲಪ್ಪ ವಿಭೂತಿ, ಮೋಹನ ಭಜಂತ್ರಿ, ಹನಂತಪ್ಪ ಗರಗ, ಹನಂತಪ್ಪ ಕಕ್ಕೇರಿ ಸೇರಿ ಹಲವರು ಇದ್ದರು.

## ನಿರ್ಭೀತ ಮತದಾನಕ್ಕಾಗಿ ಪೊಲೀಸ್ ಪಥಸಂಚಲನ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಲೋಕಸಭಾ ಚುನಾವಣೆಯ ಹಿನ್ನೆಲೆಯಲ್ಲಿ ಮತದಾರರಲ್ಲಿ ಯಾವುದೇ ಭಯ ಬೇಡ. ನಿಮ್ಮ ಜೊತೆ ನಾವಿದ್ದೇವೆ. ಮುಕ್ತವಾಗಿ ಪ್ರಜಾಪ್ರಭುತ್ವದ ತಮ್ಮ ಹಕ್ಕನ್ನು ನಿರ್ಭೀತಿಯಿಂದ ಮತ ಚಲಾಯಿಸಿ ಎನ್ನುವ ಮುಂಜಾಗ್ರತಾ ಕ್ರಮವಾಗಿ ನರೇಗಲ್ಲ ಪಟ್ಟಣದಲ್ಲಿ ನೂರಕ್ಕೂ ಹೆಚ್ಚು ಕೇರಳ ರಿಸರ್ವ್ ಪೊಲೀಸ್ ಸಿಬ್ಬಂದಿಗಳು ಹಾಗೂ ಗದಗ ಜಿಲ್ಲಾ ಹೆಚ್ಚುವರಿ ಪೋಲಿಸ್ ವರಿಷ್ಠಾಧಿಕಾರಿ ಎಸ್.ಬಿ. ಸಂಕದ ನೇತೃತ್ವದಲ್ಲಿ ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಪಥಸಂಚಲನ ನಡೆಸಿ ಜನರಲ್ಲಿ ಜಾಗೃತಿ ಮೂಡಿಸಿದರು.

ಪಟ್ಟಣದ ಕೊಂತಿ ಮಲ್ಲಪ್ಪನ ದೇವಸ್ಥಾನದಿಂದ ಪ್ರಾರಂಭವಾದ ಪಥಸಂಚಲಕ್ಕೆ ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಸ್.ಬಿ. ಸಂಕದ ಚಾಲನೆ ನೀಡಿ ಮಾತನಾಡಿ, ಪ್ರಜಾಪ್ರಭುತ್ವ ದೇಶದಲ್ಲಿ ಪ್ರಜೆಗಳೇ ಪ್ರಭುಗಳಾಗಿದ್ದು, ಮುಂಬರುವ ಚುನಾವಣೆಯಲ್ಲಿ ತಮ್ಮ ಮತದಾನದ ಹಕ್ಕನ್ನು ಮುಕ್ತವಾಗಿ ನಿರ್ಭೀತಿಯಿಂದ ಚಲಾಯಿಸಲು ಮುಂದಾಗಿ. ಯಾವುದೇ ಅಹಿತಕರ ಘಟನೆ ನಡೆಯದಂತೆ ಮತದಾರರ ಬೆನ್ನೆಲುಬಾಗಿ ನಾವಿದ್ದೇವೆ ಎಂದರು.

ರೋಣ ಸಿಪಿಐ ಎಸ್.ಎಸ್. ಬೀಳಗಿ ಮಾತನಾಡಿ, ಮುಂಬರುವ ಲೋಕಸಭಾ ಚುನಾವ ಣೆಯಲ್ಲಿ ಮತದಾರರು ಮತದಾನದಿಂದ ವಂಚಿತರಾಗದಿರಿ. ಪ್ರಜಾಪ್ರಭುತ್ವದ ಹಕ್ಕನ್ನು ತಪ್ಪದೇ ಚಲಾಯಿಸಿ. ಅದು ನಿಮ್ಮ ಆದ್ಯ ಕರ್ತವ್ಯವಾಗಿದೆ ಎಂದರು. ಕೇರಳ ರಿಸರ್ವ್ ಪೊಲೀಸ್ ಪಡೆಯೊಂದಿಗೆ ಪೊಲೀಸ್ ಠಾಣಾ ವ್ಯಾಪ್ತಿಯ ಸಿಬ್ಬಂದಿಗಳು ಪಥಸಂಚಲನ ನಡೆಸಿ ಮತದಾರರಿಗೆ ಆತ್ಮ ಸ್ಥೈರ್ಯ ತುಂಬಿದರು. ನರೇಗಲ್ಲ ಪಿಎಸ್‌ಐ ಎಸ್.ಎನ್. ಬನ್ನಿಕೊಪ್ಪ, ಎಎಸ್‌ಐ ಕೆ.ಎನ್. ಬೇಲೇರಿ, ಸಿಬ್ಬಂದಿಗಳು ಸೇರಿ ನೂರಾರು ಕೇರಳ ರಿಸರ್ವ್ ಪೊಲೀಸ್ ಪಡೆ ಗಣೇಶನ ಗುಡಿ ಸಂತೆ ಬಜಾರ್ ಹಳೆ ಬಸ್ ನಿಲ್ದಾಣ ಸೇರಿದಂತೆ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ಹೊಸ ಬಸ್ ನಿಲ್ದಾಣದ ಮುಖಾಂತರ ಪೊಲೀಸ್ ಠಾಣೆವರೆಗೂ ಪಥಸಂಚಲನ ನಡೆಸಿದರು.

### ನರೇಗಾ ಕೂಲಿಕಾರರೊಂದಿಗೆ 'ವಿಶ್ವ ಕಾರ್ಮಿಕ ದಿನಾಚರಣೆ'

## ಕಾರ್ಮಿಕರಿಗೆ ನರೇಗಾ ಆಸರೆ



■ ವಿಜಯಸಾಕ್ಷಿ ಸುದ್ದಿ, ರೋಣ

ನರೇಗಾ ಯೋಜನೆಯಡಿಯಲ್ಲಿ ಕೂಲಿಕಾರರಿಗೆ ಇದ್ದೂರಲ್ಲೇ ಕೆಲಸಗಳು ಸಿಗುತ್ತವೆ. ಹೀಗಾಗಿ ಯಾರೂ ಗುಳೆ ಹೋಗುವ ಸಂದರ್ಭ ಉದ್ಭವಿಸದು. ನರೇಗಾ ಯೋಜನೆಯು ಕಾರ್ಮಿಕ ಸ್ನೇಹಿ ವಾತವರಣ ಹೊಂದಿದೆ ಎಂದು ಅಬ್ಬಿಗೇರಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಲೋಹಿತ ಎಂ. ಅಭಿಪ್ರಾಯಪಟ್ಟರು.

ತಾಲೂಕಿನ ಅಬ್ಬಿಗೇರಿ ಗ್ರಾಮದಲ್ಲಿ ಮೇ–1, ವಿಶ್ವ ಕಾರ್ಮಿಕ ದಿನಾಚರಣೆ ಅಂಗವಾಗಿ ನರೇಗಾ ಕೂಲಿಕಾರರ ಜೊತೆಗೆ ಕೇಕ್ ಕತ್ತರಿಸಿ ಸಿಹಿ ಹಂಚುವ ಮೂಲಕ ಆಚರಿಸಿ ಅವರು ಮಾತನಾಡಿದರು.

ನರೇಗಾ ಯೋಜನೆಯಡಿಯಲ್ಲಿ ಕೂಲಿಕಾರ್ಮಿಕರಿಗೆ ಅಧಿಕ ಸೌಲಭ್ಯಗಳಿವೆ. ಕೂಲಿಕಾರ ಕೇಂದ್ರೀಕೃತ ಯೋಜನೆಯಾಗಿದ್ದು, ದೇಶಾದ್ಯಂತ ಸಾಮಾನ್ಯ ಕೂಲಿಕಾರರ ಆರ್ಥಿಕ ಜೀವನಕ್ಕೆ ನರೇಗಾ ಯೋಜನೆ ಸಹಾಯಕವಾಗಿದೆ. ನರೇಗಾ ಯೋಜನೆಯಡಿ ಕೆಲಸ ಮಾಡುವ ಸಂದರ್ಭದಲ್ಲಿ ಕೂಲಿಕಾರರು ಮೃತರಾದರೆ 2 ಲಕ್ಷ ರೂ. ವರೆಗೆ ಪರಿಹಾರ ನೀಡುವ ವ್ಯವಸ್ಥೆಯಿದೆ. ಕೆಲಸ ಮಾಡುವ ಸಂದರ್ಭದಲ್ಲಿ ಕೂಲಿಕಾರರಿಗೆ ಕುಡಿಯುವ ನೀರಿನ ವ್ಯವಸ್ಥೆ ಮತ್ತು ದಣಿವಾರಿಸಿಕೊಳ್ಳಲು ನೆರಳಿನ ವ್ಯವಸ್ಥೆ ಮಾಡುವುದು ಯೋಜನೆಯಲ್ಲಿದೆ.

ಕಾರ್ಮಿಕ ಆಂದೋಲನದ ಸಾಮಾಜಿಕ ಮತ್ತು ಆರ್ಥಿಕ ಸಾಧನೆಗಳನ್ನು ಆಚರಿಸುವ ದಿನವಾಗಿದ್ದು, ಕಾರ್ಮಿಕಪರ ಹೋರಾಟಗಾರರ ಶ್ರಮದ ಫಲದಿಂದ ಇಂದಿನ ದಿನಗಳಲ್ಲಿ ಸರ್ಕಾರದ ಯೋಜನೆಗಳಲ್ಲಿ ಕಾರ್ಮಿಕರಿಗೆ ಅಧಿಕ ಸೌಲಭ್ಯಗಳು ಸಿಗುವಂತಾಗಿವೆ. ಈ ದಿನವನ್ನು ಅರ್ಥಪೂರ್ಣವಾಗಿ ಆಚರಿಸಿ ಕೂಲಿಕಾರರು ಸಂಭ್ರಮಿಸಬೇಕೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ನರೇಗಾ ಕೂಲಿಕಾರರು ಕಾರ್ಮಿಕ ದಿನಾಚರಣೆಗೆ ಸಿದ್ಧಪಡಿಸಿದ ವಿಶೇಷ ಕೇಕ್‌ನ್ನು ಕಾರ್ಮಿಕರೇ ಕತ್ತರಿಸುವ ಮೂಲಕ ಇನ್ನಿತರ ಕೂಲಿಕಾರರಿಗೆ ಕೇಕ್ ತಿನಿಸಿ ಕಾರ್ಮಿಕ ದಿನಾಚರಣೆಯ ಶುಭಾಶಯ ಕೋರಿದರು. ಕಾರ್ಯಕ್ರಮದಲ್ಲಿ ಅಬ್ಬಿಗೇರಿ ಗ್ರಾ.ಪಂ ಸಿಬ್ಬಂದಿ ವರ್ಗ, ನರೇಗಾ ಸಿಬ್ಬಂದಿ ವರ್ಗ ಮತ್ತು ಕೂಲಿಕಾರರು ಭಾಗವಹಿಸಿದ್ದರು.

### ನೀವು ಕಾನೂನಿಗಿಂತ ಮೇಲಲ್ಲ: ಜಾರಿ ನಿರ್ದೇಶನಾಲಯಕ್ಕೆ ತರಾಟೆಗೆ ತೆಗೆದುಕೊಂಡ ದೆಹಲಿ ಹೈಕೋರ್ಟ್

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಜಾರಿ ನಿರ್ದೇಶನಾಲಯವು (ಇಡಿ) ಕಾನೂನಿನ ಚೌಕಟ್ಟಿಗೆ ಒಳಪಟ್ಟಿದೆ ಮತ್ತು ಸಾಮಾನ್ಯ ನಾಗರಿಕರ ವಿರುದ್ಧ ಬಲಪ್ರದರ್ಶನ ಮಾಡುವಂತಿಲ್ಲ ಎಂದು ದೆಹಲಿ ಹೈಕೋರ್ಟ್ ಜಾರಿ ನಿರ್ದೇಶನಾಲಯಕ್ಕೆ ಹೇಳಿದ್ದು, ನೀವು ಕಾನೂನಿಗಿಂತ ಮೇಲಲ್ಲ ಎಂದು ಸ್ಪಷ್ಟವಾಗಿ ಹೇಳಿದೆ.


### PUBLIC CAUTION NOTICE

Under the instruction and authority given by our client Mahammadnahim S/o. Abdulraheem Phaniband of Betageri. Do hereby issue this public caution notice as follows.

To, **Shankarsaa S/o. Krishnasaa Merwade of Manjunath Nagar Betageri, Tq: Dist: Gadag, And General Public and Whomsoever Concern.**

That, our client Sri. Mahammadnahim S/o. Abdulraheem Phaniband of Betageri-Gadag his owned and possessed the agriculture land bearing R.S.No. 352/3 measurig 02 Acres 33 Guntas located at Betageri-Gadag. It is stood in the name of our client. However, there is a Civil dispute O.S. No: 186/2017 is pending before the Addl. Senior Civil Judge Court at Gadag in respect of the above said land and other properties. However, you Shankarsaa S/o. Krishnasaa Merwade have approached our client on dated 17/02/2024 and assured our client to make a compromise in respect of the above said land, with the suit parties and by giving such assurance you took the signature of our client on Blank Stamp Papers for security to settled the matter pending in the court. However, now it is learnt that, you have created a general power of attorney of our client and falsely contending that, our client has authorised not only compromise the above said suit and also authorised to sell the above said land and also authorised to executed agreement of sale deed and receive earnest money and create charge over the above said land etc. However, our client has not executed any such general power of attorney in favour of you at any point of time. Therefore our client do hereby cancelled the alleged power of attorney in respect of the above said land, purported to say that, our client has executed the alleged power of attorney in favour of you on dated 17/02/2024. Therefore our client has issued this caution notice to the general public and whomsoever concerned and informed that, the alleged power of attorney has been cancelled henceforth and issue this caution notice do not make any contract or deal with above said Shankarsa S/o. Krishnasaa Merwade of Betageri in respect of the above said land in any manner. Otherwise such person will suffered loss and also liable for all cost and consequences. Even any deal or contract is made with you in respect of the above said land, are void and illegal and not binding upon our client in any manner.

**This is Public Caution Notice**

Place : Gadag
Date : 01-05-2024

Sign /-
**M.A. PANIBAND**
Advocate
Gadag


### ಬಸವರಾಜ್ ಬೊಮ್ಮಾಯಿ ಪರ ಕೇಂದ್ರ ಗೃಹ ಸಚಿವ ಅಮಿತ್ ಶಾ ರೋಡ್ ಶೋ

## ದೇಶಕ್ಕೆ ಬಸವರಾಜ ಬೊಮ್ಮಾಯಿಯವರ ಅಗತ್ಯವಿದೆ

■ ವಿಜಯಸಾಕ್ಷಿ ಸುದ್ದಿ, ಹಾವೇರಿ

ಬಸವರಾಜ ಬೊಮ್ಮಾಯಿ ದೊಡ್ಡ ನಾಯಕರಾಗಿದ್ದು, ದೇಶಕ್ಕೆ ಅವರ ಸೇವೆ ಅವಶ್ಯಕತೆ ಇದೆ. ಬೊಮ್ಮಾಯಿಯವರನ್ನು ಗೆಲ್ಲಿಸಿ ಕೇಂದ್ರಕ್ಕೆ ಕಳುಹಿಸಿ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಮತದಾರರಲ್ಲಿ ಮನವಿ ಮಾಡಿದರು.

ಅವರು ಬುಧವಾರ ಜಿಲ್ಲೆಯ ರಾಣೆಬೆನ್ನೂರಿನಲ್ಲಿ ಹಾವೇರಿ – ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಪರ ರೋಡ್ ಶೋ ನಡೆಸಿ ನೆರೆದಿದ್ದ ಜನಸ್ತೋಮವನ್ನು ಉದ್ದೇಶಿಸಿ ಮಾತನಾಡಿದರು.

ಇಷ್ಟು ದೊಡ್ಡ ಸಂಖ್ಯೆಯಲ್ಲಿ




ನೀವು ಸೇರಿದ್ದಕ್ಕೆ ಧನ್ಯವಾದ ತಿಳಿಸುವೆ. ನಾನು ನಿಮ್ಮೆಲ್ಲರಿಗೂ ಆಭಾರಿಯಾಗಿರುವೆ. ಪ್ರಧಾನ ಮಂತ್ರಿ ನರೇಂದ್ರ ಮೋದಿ ಈ ದೇಶವನ್ನು ಶಕ್ತಿಶಾಲಿಯನ್ನಾಗಿ ಮಾಡಲು ಶ್ರಮಿಸುತ್ತಿದ್ದಾರೆ. ಈ ಬಾರಿ ಕೇಂದ್ರದಲ್ಲಿ 400 ಸೀಟು ಗೆಲ್ಲುವ ಜೊತೆಗೆ ಬಸವರಾಜ ಬೊಮ್ಮಾಯಿ ಒಳ್ಳೆಯ ನಾಯಕರಿದ್ದಾರೆ. ದೇಶಕ್ಕೆ ಅವರ ಸೇವೆ ಅಗತ್ಯವಿದ್ದು, ಅವರನ್ನು ಹೆಚ್ಚಿನ ಮತಗಳಿಂದ ಆರಿಸಿ ಕಳುಹಿಸಿ ಎಂದು ಮನವಿ ಮಾಡಿದರು.

ಇದಕ್ಕೂ ಮೊದಲು ರಾಣೆಬೆನ್ನೂರಿನ ಕುರುಬರಗೆ ಕ್ರಾಸ್‌ನಿಂದ ಎಂಜಿ ರಸ್ತೆ ಮಾರ್ಗವಾಗಿ ಅಶೋಕ್ ಸರ್ಕಲ್ ವರೆಗೂ ನಡೆದ ರೋಡ್ ಶೋನಲ್ಲಿ ಅಮಿತ್ ಶಾ ಪಾಲ್ಗೊಂಡಿದ್ದರು.

ರೋಡ್ ಶೋ ನಲ್ಲಿ ಹಾವೇರಿ – ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ, ಬಿಜೆಪಿ ಜಿಲ್ಲಾದ್ಯಕ್ಷ ಅರುಣ್ ಕುಮಾರ್ ಪೂಜಾರ್ , ಮಾಜಿ ಸಚಿವ ಬಿ.ಸಿ. ಪಾಟೀಲ್ ಸೇರಿದಂತೆ ಸ್ಥಳೀಯ ಮುಖಂಡರು ಹಾಗೂ ಬಿಜೆಪಿ ಕಾರ್ಯಕರ್ತರು ಪಾಲ್ಗೊಂಡಿದ್ದರು.

ರಾಣೆಬೆನ್ನೂರಿನಲ್ಲಿ ರೋಡ್ ಶೋ ಮುಗಿಸಿ ಅಮಿತ್ ಶಾ ಹುಬ್ಬಳ್ಳಿಗೆ ತೆರಳಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka